ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೮೪

**ಪಟ್ಟಿ – ೦೯**

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆರಡನೆಯ ಅಧಿವೇಶನ

**ಗುರುವಾರ, ದಿನಾಂಕ: ೦೧ನೇ ಡಿಸೆಂಬರ್, ೨೦೧೬**

---

## ಸಮೂಹ – IV

೧. ಮುಖ್ಯಮಂತ್ರಿಗಳು.

೨. ಗೃಹ ಸಚಿವರು.

೩. ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು.

೪. ನಗರಾಭಿವೃದ್ಧಿ ಹಾಗೂ ಹಜ್ ಸಚಿವರು.

೫. ಅಬಕಾರಿ ಸಚಿವರು.

---

## ವಿಜಯಪುರ ನಗರ ಅಭಿವೃದ್ಧಿ ಪಾಲಿಕೆಯ ಸದಸ್ಯರು, ಅಧ್ಯಕ್ಷರ ಕುರಿತು

**ಶ್ರೀ ಅರುಣ ಶಹಾಪುರ (ಪದವೀಧರರ ಕ್ಷೇತ್ರ ) –**

೯೧ (೧೧೯) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ ನಗರ ಅಭಿವೃದ್ಧಿ ಪಾಲಿಕೆಗೆ ನೇಮಕಗೊಂಡ ಅಧ್ಯಕ್ಷರು, ಸದಸ್ಯರು, ಪದನಿಮಿತ್ತ ಸದಸ್ಯರು ಹಾಗೂ (ಪದನಿಮಿತ್ತ ಶಾಸಕ/ ಸಂಸದ) ಸದಸ್ಯರ ಹೆಸರು ಮತ್ತು ವಿವರ ನೀಡುವುದು ;

(ಆ) ಶಾಸಕರು ಹಾಗೂ ಸಂಸದರನ್ನು ಪದನಿಮಿತ್ತ ಸದಸ್ಯರನ್ನಾಗಿ ಮಾಡಲು ಅಥವಾ ವಿಜಯಪುರ ನಗರ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರನ್ನಾಗಿ ಮಾಡಲು ಇರುವ ಕಾನೂನು ನಿಯಮಾವಳಿಗಳೇನು? (ವಿವರ ನೀಡುವುದು)

## ಕಳೆದ ಮೂರು ವರ್ಷದಲ್ಲಿ ಕೊಲೆಯಾಗಿರುವ ರಾಷ್ಟ್ರೀಯ ಸ್ವಯಂ ಸೇವಕರ ಹಾಗೂ ಭಾರತೀಯ ಜನತಾ ಪಕ್ಷದ ಕಾರ್ಯಕರ್ತರ ಬಗ್ಗೆ

**ಶ್ರೀ ಅರುಣ ಶಹಾಪುರ (ಪದವೀಧರರ ಕ್ಷೇತ್ರ ) –**

೯೨ (೧೧೨೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೊಲೆಯಾಗಿರುವ ರಾಷ್ಟ್ರೀಯ ಸ್ವಯಂ ಸೇವಕರ ಹಾಗೂ ಭಾರತೀಯ ಜನತಾ ಪಕ್ಷ ಹಿನ್ನೆಲೆಯುಳ್ಳ ವ್ಯಕ್ತಿಗಳು ಯಾರು ಯಾರು ; (ಪ್ರತಿ ಘಟನೆಯ ವಿವರ ಹಾಗೂ ಕೊಲೆಯ ಹಿಂದಿರುವ ಸಂಘಟನೆಯ ವಿವರ ನೀಡುವುದು)

(ಆ) ಈ ಕೊಲೆಗೆ ಸಂಬಂಧಿಸಿದಂತೆ ಯಾರನ್ನಾದರೂ ಬಂಧಿಸಲಾಗಿದೆಯೇ ; ಎಷ್ಟು ಜನರನ್ನು ಬಂಧಿಸಲಾಗಿದೆ ; (ವಿವರ ನೀಡುವುದು)

(ಇ) ಇದನ್ನು ತಡೆಗಟ್ಟಲು ಸರ್ಕಾರ ತೆಗೆದುಕೊಂಡಿರುವ ಹಾಗೂ ತೆಗೆದುಕೊಳ್ಳಲಿರುವ ಕ್ರಮಗಳೇನು ?

## ಗೃಹ ಇಲಾಖೆಯಲ್ಲಿ ವಿವಿಧ ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೮೯೩ (೧೨೨೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಗೃಹ ಇಲಾಖೆಯಲ್ಲಿ ವಿವಿಧ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗಿದೆಯೇ ; ಇದ್ದಲ್ಲಿ, ಹುದ್ದೆವಾರು ಮಾಹಿತಿ ನೀಡುವುದು ;

(ಆ) ಸದರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯಲ್ಲಿ ವಿಳಂಬವಾಗಿ ಅರ್ಹ ಅಭ್ಯರ್ಥಿಗಳು ವಯೋಮಿತಿ ಮೀರುವ ಆತಂಕದಲ್ಲಿರುವುದು ನಿಜವೇ ; ಇದ್ದಲ್ಲಿ, ಕಾರಣಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು ;

(ಇ) ಕಲಬುರಗಿ ವಿಭಾಗದ ೬ ಜಿಲ್ಲೆಗಳಲ್ಲಿ ಸದರಿ ಇಲಾಖೆಯಲ್ಲಿರುವ ಖಾಲಿ ಹುದ್ದೆಗಳೆಷ್ಟು ; ಹಾಗೂ ನೇಮಕಾತಿಗಳಾಗುತ್ತಿರುವ ಹುದ್ದೆಗಳೆಷ್ಟು ; ಕಳೆದ ೨ ವರ್ಷದ ಜಿಲ್ಲಾವಾರು ಮಾಹಿತಿ ನೀಡುವುದು ;

(ಈ) ಕಲಬುರಗಿ ವಿಭಾಗದ ಜಿಲ್ಲೆಗಳಲ್ಲಿ ೩೭೧(ಜೆ) ಅಡಿಯ ಮೀಸಲಾತಿ ಕಲ್ಪಿಸಲಾಗಿದೆಯೇ ; ಹಾಗೂ ವಯೋಮಿತಿ ಸಡಿಲಿಕೆ ನೀಡಲಾಗಿದೆಯೇ ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ಜಿಲ್ಲಾ ದಿನ ಪತ್ರಿಕೆಗಳು ಹಾಗೂ "ನೂತನ ಜಾಹೀರಾತು ನೀತಿ–೨೦೧೪" ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೮೯೪ (೧೨೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವಂತಹ ಜಿಲ್ಲಾ ದಿನಪತ್ರಿಕೆಗಳು ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಆ ಪೈಕಿ ಗಡಿ ಪ್ರದೇಶದ ಹಾಗೂ ಇತರ ದಿನಪತ್ರಿಕೆಗಳು ಎಷ್ಟು ; ಮಾಲೀಕತ್ವ ಹೊಂದಿರುವ ದಿನಪತ್ರಿಕೆಗಳ ವರ್ಗವಾರು, ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು ;

(ಇ) ಸದರಿ ದಿನಪತ್ರಿಕೆಗಳಲ್ಲಿ ನೂತನ ಜಾಹೀರಾತು ನೀತಿ–೨೦೧೪ ಅಡಿಯಲ್ಲಿ ದಿನಪತ್ರಿಕೆಗಳಿಗೆ ಜಾಹೀರಾತು ನೀಡಲಾಗುತ್ತಿದೆಯೇ ; ಇದ್ದಲ್ಲಿ, ಎಷ್ಟು ದಿನಪತ್ರಿಕೆಗಳಿಗೆ ಜಾಹೀರಾತು ನೀಡಲಾಗುತ್ತಿದೆ ;

(ಈ) ನೂತನ ಜಾಹೀರಾತು ನೀತಿ–೨೦೧೪ ಅಡಿಯಲ್ಲಿ ಜಾಹೀರಾತು ನೀಡದೆ ಇರುವ ದಿನಪತ್ರಿಕೆಗಳಿಗೆ ಜಾಹೀರಾತು ನೀಡಲು ಕ್ರಮ ಕೈಗೊಳ್ಳಲಾಗುವುದೇ ? (ಮಾಹಿತಿ ನೀಡುವುದು)

## ಕಲಬುರಗಿ ಮಹಾನಗರದಲ್ಲಿ ಪೊಲೀಸ್ ಆಯುಕ್ತರ ಕಛೇರಿ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ ) –**

೮೯೫ (೧೨೨೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸಲು ಕಲಬುರಗಿ ಮಹಾನಗರದಲ್ಲಿ ಪೊಲೀಸ್ ಆಯುಕ್ತರ ಕಛೇರಿ ಸೃಜಿಸುವ ಘೋಷಣೆಯನ್ನು ಸರ್ಕಾರದಿಂದ ಮಾಡಲಾಗಿದೆಯೇ ; ಇದ್ದಲ್ಲಿ, ಸಂಪೂರ್ಣ ವಿವರ ನೀಡುವುದು ; ಕಮಿಷ್ನರ್ ಕಾರ್ಯಾಲಯ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಸಂಪೂರ್ಣ ವಿವರ ನೀಡುವುದು ;

(ಆ) ಈ ನಿಟ್ಟಿನಲ್ಲಿ ಡೈರಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಆಫ್ ಪೊಲೀಸ್ ಬೆಂಗಳೂರು, ಇವರಿಂದ ಪ್ರಧಾನ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ, ಇವರಿಗೆ ಪತ್ರ ಸಂಖ್ಯೆ ಆರ್.ಎಲ್.ಎನ್ (೪) ೪೭/ ೨೦೦೦–೦೧ ಬಿ (೧೨), ದಿನಾಂಕ: ೨೧.೦೯.೨೦೧೫ ಕಲಬುರಗಿ ನಗರದಲ್ಲಿ

ಪೊಲೀಸ್ ಆಯುಕ್ತರ ಕಛೇರಿ ಸೃಜಿಸುವ ಕುರಿತು ಪ್ರಸ್ತಾವನೆ ಸಲ್ಲಿಸಲಾಗಿದೆಯೇ ; ಇದ್ದಲ್ಲಿ, ಕಲಬುರಗಿ ನಗರದಲ್ಲಿ ಪೊಲೀಸ್ ಆಯುಕ್ತರ ಕಛೇರಿ ಸೃಜಿಸುವ ಶಿಫಾರಸ್ಸು ಸಲ್ಲಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಕಲಬುರಗಿ ನಗರದಲ್ಲಿ ಪೊಲೀಸ್ ಆಯುಕ್ತರ ಕಛೇರಿ ಸೃಜಿಸುವ ಶಿಫಾರಸ್ಸು ಮಾಡಲಾಗಿದ್ದು, ಇಲ್ಲಿಯವರೆಗೆ ಮಂಜೂರಾತಿ ನೀಡದೆ ವಿಳಂಬ ಧೋರಣೆ ತಾಳಿದ್ದಕ್ಕೆ ಕಾರಣಗಳೇನು ; (ವಿವರ ನೀಡುವುದು)

(ಈ) ಯಾವ ಕಾಲಮಿತಿಯೊಳಗೆ ಕಲಬುರಗಿ ನಗರದಲ್ಲಿ ಪೊಲೀಸ್ ಆಯುಕ್ತರ ಕಛೇರಿ ಮಂಜೂರು ಮಾಡಲಾಗುವುದು? (ಸ್ಪಷ್ಟವಾದ ಮಾಹಿತಿ ನೀಡುವುದು)

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಬಿಡುಗಡೆಯಾದ ಹಣದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೯೬ (೧೨೩೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದಿಂದ ಕಳೆದ ೩ ವರ್ಷಗಳಲ್ಲಿ ಅಭಿವೃದ್ಧಿಗಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಬಿಡುಗಡೆಯಾದ ಹಣವೆಷ್ಟು ; (ವರ್ಷವಾರು ವಿವರ ನೀಡುವುದು)

(ಆ) ಬಿಡುಗಡೆಯಾದ ಹಣದಲ್ಲಿ ಯಾವ ಯಾವ ಕಾಮಗಾರಿಗಳು ಪೂರ್ಣಗೊಂಡಿದೆ ; (ವಿವರ ನೀಡುವುದು)

(ಇ) ಪೂರ್ಣಗೊಳ್ಳದೇ ಬಾಕಿ ಇರುವ ಕಾಮಗಾರಿಗಳಾವುವು ; ಇವುಗಳನ್ನು ಎಷ್ಟು ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ; (ವಿವರ ನೀಡುವುದು)

(ಈ) ಈ ಕಾಮಗಾರಿಗಳಲ್ಲಿ ಅವ್ಯವಹಾರ ನಡೆದಿರುವುದು ನಿಜವೇ ; ಹಾಗಿದ್ದಲ್ಲಿ, ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ತಪ್ಪಿತಸ್ಥ ಅಧಿಕಾರಿಗಳ ವಿವರ ನೀಡುವುದು ?

## ಸರ್ಕಾರಿ ಹುದ್ದೆಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೯೭ (೧೨೨೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ವ್ಯಾಪ್ತಿಯಲ್ಲಿರುವ ಇಲಾಖೆಗಳು ಎಷ್ಟು ; ಅವು ಯಾವುವು ;

(ಆ) ರಾಜ್ಯ ಸರ್ಕಾರದ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; (ಇಲಾಖಾವಾರು ವಿವರ ನೀಡುವುದು)

(ಇ) ಇವುಗಳಲ್ಲಿ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಭರ್ತಿ ಮಾಡುವ ಹುದ್ದೆಗಳಾವುವು ; (ವಿವರ ನೀಡುವುದು)

(ಈ) ವಿದ್ಯಾವಂತ ಯುವಕರಿಗೆ ಹಾಗೂ ವಯೋಮಿತಿ ಮೀರುತ್ತಿರುವ ಅಭ್ಯರ್ಥಿಗಳಿಗೆ ಅನುಕೂಲವಾಗುವಂತೆ ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಕ್ರಮಬದ್ಧವಾಗಿ ಪ್ರತಿವರ್ಷ ನೇಮಕಾತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ವಿವರ ನೀಡುವುದು?

## ಮಕ್ಕಳ ಅಪಹರಣದ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೮೯೮ (೧೨೨೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನಲ್ಲಿ ಇತ್ತೀಚೆಗೆ ಮಕ್ಕಳ ಅಪಹರಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಮಕ್ಕಳನ್ನು ಅಪಹರಿಸಲಾಗಿದೆ ; (ವಿವರ ನೀಡುವುದು)

(ಆ) ಈ ಜಾಲದಲ್ಲಿ ಸಿಲುಕಿ ಹಾಕಿಕೊಂಡಿರುವ ವ್ಯಕ್ತಿಗಳ ವಿವರ ನೀಡುವುದು ;

(ಇ) ಈ ಜಾಲವನ್ನು ಭೇದಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಪ್ರಕರಣದಲ್ಲಿ ಶಿಕ್ಷೆಗೆ ಒಳಗಾಗಿರುವವರ ಸಂಖ್ಯೆ ಎಷ್ಟು ? (ವಿವರ ನೀಡುವುದು)

## ಶಿವಮೊಗ್ಗ, ಭದ್ರಾವತಿ ಸ್ಥಳೀಯ ಮಹಾಯೋಜನೆ ಬಗ್ಗೆ

**ಶ್ರೀ ಎಂ.ಬಿ. ಭಾನುಪ್ರಕಾಶ (ವಿಧಾನಸಭಾ ಕ್ಷೇತ್ರ ) –**

೮೯೯ (೧೧೫೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್‌ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ, ಭದ್ರಾವತಿ ಸ್ಥಳೀಯ ಮಹಾಯೋಜನೆ–೨೦೩೧ (ಪ–೧೧) ವಲಯ ನಿಯಮಾವಳಿ ಪರಿಷ್ಕರಣೆ ಕೋರಿ ಎಷ್ಟು ಅರ್ಜಿಗಳು ಬಂದಿವೆ ; ಪರಿಷ್ಕರಣೆ ಯಾವ ಹಂತದಲ್ಲಿದೆ ; (ಅವುಗಳ ನಕಲು ಮತ್ತು ವಿವರ ಒದಗಿಸುವುದು)

(ಆ) ಈ ಯೋಜನೆಯ ಪರಿಷ್ಕರಣೆಗೆ ಎಷ್ಟು ವರ್ಷಗಳ ಕಾಲಾವಕಾಶ ಬೇಕಾಗುತ್ತದೆ; ದಿನಾಂಕ: ೨೭.೦೮.೨೦೧೨ರಿಂದ ಇಲ್ಲಿಯವರೆಗೆ ವಲಯ ನಿಯಮಾವಳಿ ಪರಿಷ್ಕರಣೆ ಮಾಡದಿರುವಂತಹ ತಾಂತ್ರಿಕ ದೋಷಗಳೇನಿದೆ ; (ಪೂರ್ಣ ವಿವರ ಒದಗಿಸುವುದು)

(ಇ) ಶಿವಮೊಗ್ಗ, ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರ ಹಾಗೂ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಎಷ್ಟು ಅನಿಲ ದಾಸ್ತಾನು (ಗ್ಯಾಸ್) ಗೋಡೌನ್‌ಗಳಿವೆ ; ಎಲ್ಲೆಲ್ಲಿವೆ ; (H.P., BHARATH, INDANE ಇತ್ಯಾದಿ) ಅವುಗಳು ಕಾರ್ಯನಿರ್ವಹಿಸುತ್ತಿರುವ ರಸ್ತೆಗಳ ಅಗಲ ಎಷ್ಟೆಷ್ಟಿವೆ ಎಂಬುದರ ವಿವರಗಳನ್ನು ಒದಗಿಸುವುದು;

(ಈ) ನಗರ ಸಭೆ, ಮಹಾನಗರ ಪಾಲಿಕೆ, ನಗರಾಭಿವೃದ್ಧಿ ಪ್ರಾಧಿಕಾರ ಅನುಮೋದಿಸಿರುವ ಗೋಡೌನ್‌ಗಳು ಎಷ್ಟು ; (ಅನುಮೋದಿತ ನಕ್ಷೆ, ಮಂಜೂರಾತಿ ಪತ್ರ, ಪರವಾನಗಿ ನಕಲು ಸಹಿತ ಮಾಹಿತಿ ಒದಗಿಸುವುದು)

(ಉ) ಹಾಲಿ ನಗರಾಭಿವೃದ್ಧಿ ಪ್ರಾಧಿಕಾರ ಶಿಫಾರಸ್ಸು ಮಾಡಿರುವ ಪ್ರಸ್ತಾವನೆಗಳಿಗೆ ಯಾವಾಗ ಅನುಮೋದನೆ ನೀಡಲಾಗುವುದು ; ಎಷ್ಟು ಕಾಲಾವಕಾಶ ಬೇಕಾಗುತ್ತದೆ? (ಪೂರ್ಣ ವಿವರಗಳನ್ನು ಒದಗಿಸುವುದು)

## ರಾಯಚೂರು ನಗರವನ್ನು ಮಹಾನಗರ ಪಾಲಿಕೆಯನ್ನಾಗಿ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೯೦೦ (೧೧೬೬) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ನಗರದಲ್ಲಿ UGD (ಯು.ಜಿ.ಡಿ.) ಯೋಜನೆಗೆ ಇಲ್ಲಿಯವರೆಗೆ ಖರ್ಚು ಮಾಡಿದ ವೆಚ್ಚ ಎಷ್ಟು ; ಬಾಕಿ ಉಳಿದ ಕಾಮಗಾರಿಗೆ ಬೇಕಾಗಿರುವ ಅನುದಾನ ಎಷ್ಟು ; ಬಾಕಿ ಉಳಿದ ಕಾಮಗಾರಿಯನ್ನು ಪೂರ್ಣಗೊಳಿಸುವುದಕ್ಕೆ ಸರ್ಕಾರ ತೆಗೆದುಕೊಂಡ ಕ್ರಮವೇನು; ತೆಗೆದುಕೊಳ್ಳುವ ಕಾಲಮಿತಿ ಅವಧಿ ಎಷ್ಟು ; ಯಾವಾಗ ಕಾಮಗಾರಿ ಪೂರ್ಣಗೊಳ್ಳುವುದು;

(ಆ) ರಾಯಚೂರು ನಗರವನ್ನು ಮಹಾನಗರ ಪಾಲಿಕೆಯನ್ನಾಗಿ (ಕಾರ್ಪೊರೇಷನ್) ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಮಹಾನಗರ ಪಾಲಿಕೆಯನ್ನಾಗಿ ಮಾಡಲು ನಗರಕ್ಕೆ ಇರಬೇಕಾದ ಅರ್ಹತೆಗಳೇನು ?

## ನಿವೃತ್ತ ಸರ್ಕಾರಿ ನೌಕರರಿಗೆ ನೀಡುವ ಪಿಂಚಣಿ ವ್ಯವಸ್ಥೆ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೯೦೧ (೧೧೬೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೧೯೯೩ರ ನಂತರ ನಿವೃತ್ತರಾದ ಸರ್ಕಾರಿ ನೌಕರರಿಗೆ ಹಾಗೂ ೧೯೯೩ರೊಳಗೆ ನಿವೃತ್ತರಾದ ಸರ್ಕಾರಿ ನೌಕರರಿಗೆ ನೀಡುವ ಪಿಂಚಣಿ ವ್ಯವಸ್ಥೆ ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ರಾಜ್ಯ ಸರ್ಕಾರವು ೨೦೦೬ರಿಂದೀಚೆಗೆ ನೇಮಕ ಹೊಂದಿದ ನೌಕರರಿಗೆ ಹೊಸ ಪಿಂಚಣಿ ಯೋಜನೆ ಜಾರಿಗೆ ತಂದಿದ್ದು, ಈ ಯೋಜನೆಯನ್ನು ಕೈಬಿಡುವಂತೆ ಒತ್ತಾಯಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ಎನ್.ಪಿ.ಎಸ್. ನೌಕರರ ಹಾಗೂ ಸರ್ಕಾರದ ವಂತಿಗೆಯ ಹಣವನ್ನು ಷೇರು ಮಾರುಕಟ್ಟೆಯಲ್ಲಿ ತೊಡಗಿಸುತ್ತಿರುವುದರಿಂದ, ಭದ್ರತೆಯ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

## ರಾಯಚೂರು ಜಿಲ್ಲೆಯಲ್ಲಿರುವ CL-2, CL-9 ಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೯೦೨ (೧೧೬೮) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ CL-9 ಮತ್ತು CL-2ಗಳ (ಬಾರ್ ಮತ್ತು ರೆಸ್ಟೋರೆಂಟ್ ಹಾಗೂ ವೈನ್ ಶಾಪ್) ಸಂಖ್ಯೆ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿ ಶೇಂದಿ ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗೂ ಶೇಂದಿ ಮಾರಾಟ ಮಾಡುತ್ತಿದ್ದ ಮುಕ್ತೇದಾರರ ಸಂಘಗಳಿಗೆ (Society) ಪರಿಹಾರ ಕಲ್ಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಗುಪ್ತದಳ ಇಲಾಖೆಯನ್ನು ಬಲಿಷ್ಠಗೊಳಿಸುವ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೯೦೩ (೧೧೬೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ಗುಪ್ತದಳ ಇಲಾಖೆಯನ್ನು ಉತ್ತಮ ಕಾರ್ಯ ಮತ್ತು ಬಲಿಷ್ಠಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯ ಸರ್ಕಾರದ ಜನಪರ ಯೋಜನೆಗಳನ್ನು ಪ್ರಚಾರ ಮಾಡುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೯೦೪ (೧೧೬೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಜನಪರ ಯೋಜನೆಗಳ ಬಗ್ಗೆ ಪ್ರಚಾರ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಆ) ಜಿಲ್ಲಾ ಮಟ್ಟದಲ್ಲಿ ಹಾಗೂ ಗ್ರಾಮೀಣ ಮಟ್ಟದಲ್ಲಿ ಅನೇಕ ಪತ್ರಿಕೆಗಳು ಪರವಾನಿಗೆ ಇಲ್ಲದೆ ಪ್ರಕಟವಾಗುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು ;

(ಇ) ರಾಯಚೂರು ಜಿಲ್ಲೆಯಲ್ಲಿ ಪರವಾನಿಗೆ ಇಲ್ಲದೆ ಪ್ರಕಟವಾಗುವ ಪತ್ರಿಕೆಗಳ ಸಂಖ್ಯೆ ಎಷ್ಟು ? (ಸಂಪೂರ್ಣ ವಿವರ ನೀಡುವುದು)

## B.W.S.S.B. ಯಿಂದ S.T.P. ನಿರ್ಮಾಣದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೬೦೫ (೧೨೩೨) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯು (B.W.S.S.B.) ೨೦ ಅಥವಾ ಹೆಚ್ಚಿನ ಅಪಾರ್ಟ್‌ಮೆಂಟ್‌ಗಳ (ಗುಂಪು ಮನೆಗಳ)ನ್ನು ಹೊಂದಿರುವವರಿಗೆ ಕೊಳಚೆ ನೀರು ಸಂಸ್ಕರಣಾ ಘಟಕ (S.T.P.) ನಿರ್ಮಿಸಬೇಕೆಂದು ಆದೇಶ ಮಾಡಿರುವುದು ನಿಜವೇ ;

(ಆ) ಸದರಿ ಅಪಾರ್ಟ್‌ಮೆಂಟ್‌ಗಳಿಗೆ ಕೊಳಚೆ ನೀರು ಸಂಸ್ಕರಣಾ ಘಟಕ ಕಡ್ಡಾಯವೇ ಅಥವಾ ಐಚ್ಛಿಕವೇ ; (ವಿವರವಾದ ಆದೇಶದೊಂದಿಗೆ ಮಾಹಿತಿ ನೀಡುವುದು)

(ಇ) ದಿನಾಂಕ: ೨೫.೦೨.೨೦೧೬ಕ್ಕೆ ಮೊದಲು ಕಟ್ಟಡವನ್ನು ಕಟ್ಟುವಾಗ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಮತ್ತು ಬೆಂಗಳೂರು ನೀರು ಸರಬರಾಜು ಮಂಡಳಿ ಪರವಾನಿಗೆ ನೀಡುವಾಗ ಮಾಲೀಕರಿಗೆ ಕೊಳಚೆ ನೀರು ಸಂಸ್ಕರಣಾ ಘಟಕ ಸ್ಥಾಪಿಸುವುದು ಕಡ್ಡಾಯ ಎಂದು ಅಧಿಕೃತವಾಗಿ ತಿಳಿಸಲಾಗಿತ್ತೇ ;

(ಈ) ಒಂದು ಸಲ ಪರವಾನಗಿಯ ನಿಯಮಗಳಂತೆಯೇ ಕಟ್ಟಡವನ್ನು ನಿರ್ಮಿಸಿದ ಮೇಲೆ ಅನಗತ್ಯವಾಗಿ ಜಾರಿಗೆ ತರಲಾಗದ ಆದೇಶ ನೀಡಿ, ಈ ಮನೆಗಳ ನಿವಾಸಿಗಳಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇಂತಹ ಅವೈಜ್ಞಾನಿಕ ಆದೇಶದಿಂದ, ದಂಡದ ರೂಪದಲ್ಲಿ ವಸೂಲಾದ ಹಣವನ್ನು ವಾಪಸ್ಸು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರಾಜ್ಯದ ನಗರ ಪಾಲಿಕೆಗಳಲ್ಲಿನ ತ್ಯಾಜ್ಯದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೬೦೬ (೧೨೩೪) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್‌ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎಷ್ಟು ಮಹಾನಗರ / ನಗರ ಪಾಲಿಕೆಗಳಿವೆ ; (ಬೆಂಗಳೂರು ಹೊರತುಪಡಿಸಿ) ಅವು ಯಾವುವು ;

(ಆ) ಇವುಗಳಲ್ಲಿ ದಿನ ಒಂದಕ್ಕೆ ಎಷ್ಟು ತ್ಯಾಜ್ಯ (ಘನ, ಜೈವಿಕ, ಇತರೆ) ಉತ್ಪತ್ತಿಯಾಗುತ್ತದೆ ; ಇದನ್ನು ಯಾವ ರೀತಿ ವಿಲೇವಾರಿ ಮಾಡಲಾಗುತ್ತದೆ ; (ಪಾಲಿಕೆವಾರು ವಿವರವಾದ ಮಾಹಿತಿ ನೀಡುವುದು)

(ಇ) ಮಹಾನಗರ / ನಗರ ಪಾಲಿಕೆಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯದಿಂದ ವಿದ್ಯುತ್ ಉತ್ಪಾದನೆ ಮಾಡಲಾಗುತ್ತದೆಯೇ ; (ವಿವರವಾದ ಮಾಹಿತಿ ನೀಡುವುದು)

(ಈ) ಇದರ ಸಂಬಂಧ ಇಲ್ಲಿಯವರೆಗೂ ಆಗಿರುವ ಒಡಂಡಿಕೆಗಳೇನು ? (ವಿವರವಾಗಿ ಪಾಲಿಕೆವಾರು, ಕಂಪನಿವಾರು ಮಾಹಿತಿ ನೀಡುವುದು)

## ಸರ್ಕಾರದ ಸಚಿವಾಲಯದಲ್ಲಿನ ಇಲಾಖೆಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೬೦೭ (೧೨೩೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದ ಸಚಿವಾಲಯದಲ್ಲಿ ಇರುವ ಇಲಾಖೆಗಳೆಷ್ಟು ; ಅವು ಯಾವುವು ಮತ್ತು ಕ್ಷೇತ್ರದಲ್ಲಿರುವ ಇಲಾಖೆಗಳು ಎಷ್ಟು ; ಅವು ಯಾವುವು ; (ವಿವರವಾದ ಮಾಹಿತಿ ನೀಡುವುದು)

(ಆ) ಸಚಿವಾಲಯದ ಇಲಾಖೆಗಳು ಮತ್ತು ಕ್ಷೇತ್ರ ಇಲಾಖೆಗಳ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ಕಂಪನಿಗಳು, ಶಾಸನಬದ್ಧ

ಮಂಡಳಿಗಳು, ಉದ್ದಿಮೆಗಳು, ಅಂಗ ಸಂಸ್ಥೆಗಳು, ಸೊಸೈಟಿಗಳು, ಸಂಶೋಧನಾ ಕೇಂದ್ರಗಳು, ಆಯೋಗಗಳು ಹಾಗೂ ಇತರೆ ಸರ್ಕಾರಿ ಸಂಸ್ಥೆಗಳು ಎಷ್ಟಿವೆ ; ಯಾವುವು ; (ವಿವರವಾಗಿ ಇಲಾಖಾವಾರು, ಕೇಂದ್ರ ಕಛೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ನೀಡುವುದು)

(ಇ) ಹಾಲಿ ಸದರಿ ಸಂಸ್ಥೆಗಳ ಮುಖ್ಯಸ್ಥರು ಯಾರು ? (ಹೆಸರು ಹಾಗೂ ದೂರವಾಣಿ ಸಂಖ್ಯೆಯೊಂದಿಗೆ ವಿವರ ನೀಡುವುದು)

## IMFL ತಯಾರಿಕಾ ಘಟಕಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ ) –**

೯೦೮ (೧೨೩೩) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ IMFL (Indian Made Foreign Liquor) ತಯಾರಿಕಾ ಘಟಕಗಳು ಎಷ್ಟಿವೆ ; ಘಟಕಗಳ ಹೆಸರು, ವಿಳಾಸ, ಮಾಲೀಕರ ಹೆಸರಿನೊಂದಿಗೆ ವಿವರವಾದ ಮಾಹಿತಿ ನೀಡುವುದು ;

(ಆ) ಸದರಿ ಘಟಕಗಳು ಕಳೆದ ವರ್ಷ ಎಷ್ಟು ಮೌಲ್ಯದ ಮದ್ಯವನ್ನು ರಾಜ್ಯ ಪಾನೀಯ ನಿಗಮದ ಮೂಲಕ ಮಾರಾಟ ಮಾಡಿವೆ ; (ವಿವರವಾದ ಮಾಹಿತಿ ನೀಡುವುದು)

(ಇ) ಸದರಿ ಘಟಕಗಳು ಸರ್ಕಾರಕ್ಕೆ ಪಾವತಿ ಮಾಡಬೇಕಾದ ಒಟ್ಟು ತೆರಿಗೆ ಎಷ್ಟು ; ಹಾಲಿ ಪಾವತಿ ಮಾಡಿರುವ ಹಾಗೂ ಬಾಕಿ ಇರುವ ತೆರಿಗೆ ಎಷ್ಟು ; (ಘಟಕವಾರು ವಿವರವಾದ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ದ್ರಾಕ್ಷರಸ ತಯಾರಿಕಾ ಘಟಕಗಳು ಎಷ್ಟು ಇವೆ ; ಸರ್ಕಾರಕ್ಕೆ ಇವುಗಳಿಂದ ಬರುತ್ತಿರುವ ಆದಾಯ ಎಷ್ಟು ? (ವಿವರವಾದ ಮಾಹಿತಿ ನೀಡುವುದು)

## ಕನ್ನಡ ಶೀಘ್ರಲಿಪಿಗಾರರ ನೇಮಕದ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೦೯ (೧೧೪೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕನ್ನಡವನ್ನು ಸಂಪೂರ್ಣವಾಗಿ ಆಡಳಿತ ಭಾಷೆಯಾಗಿ ಎಲ್ಲಾ ಹಂತಗಳಲ್ಲೂ ಜಾರಿಗೆ ತರಬೇಕೆಂಬುದು ಸರ್ಕಾರದ ಉದ್ದೇಶವಲ್ಲವೆ ;

(ಆ) ಹಾಗಿದ್ದಲ್ಲಿ, ಇದಕ್ಕೆ ಪೂರಕವಾಗಿ ಬೇಕಾದ ಕನ್ನಡ ಶೀಘ್ರಲಿಪಿಗಾರರನ್ನು (Stenographers) ರಾಜ್ಯ ಸರ್ಕಾರ ಎಲ್ಲಾ ಇಲಾಖೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನೇಮಕ ಮಾಡದಿರಲು ಕಾರಣವೇನು ;

(ಇ) ಕನ್ನಡ ಶೀಘ್ರಲಿಪಿಗಾರರ ನೇಮಕಾತಿಗೆ ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ ; ಎಷ್ಟು ದಿವಸಗಳಲ್ಲಿ ಈ ಪ್ರಕ್ರಿಯೆ ಪ್ರಾರಂಭವಾಗುತ್ತದೆ ?

## ಪೊಲೀಸ್ ಠಾಣೆ ಮತ್ತು ಸಿಬ್ಬಂದಿಗಳ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೧೦ (೧೧೫೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿರುವ ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು ;

(ಆ) ಜನಸಂಖ್ಯೆಗನುಗುಣವಾಗಿ ಪೊಲೀಸ್ ಠಾಣೆ ಮತ್ತು ಸಿಬ್ಬಂದಿ ವರ್ಗದವರಿಲ್ಲದಿರುವುದರಿಂದ ದೈನಂದಿನ ಕೆಲಸ ಕಾರ್ಯಗಳಿಗೆ ತೊಂದರೆಯಾಗುವುದಿಲ್ಲವೆ ;

(ಇ) ರಾಷ್ಟ್ರೀಯ ಪೊಲೀಸ್ ಆಯೋಗದ ವರದಿಗನುಸಾರವಾಗಿ ಇನ್ನೂ ಎಷ್ಟು ಪೊಲೀಸ್ ಠಾಣೆಗಳನ್ನು ಈ ಜಿಲ್ಲೆಗಳಲ್ಲಿ ಸ್ಥಾಪಿಸಬೇಕಾಗುತ್ತದೆ ; ಈ ಠಾಣೆಗಳನ್ನು ಎಷ್ಟು ದಿವಸಗಳಲ್ಲಿ ತೆರೆಯಲಾಗುತ್ತದೆ ;

(ಈ) ಖಾಲಿ ಇರುವ ಪೊಲೀಸ್ ಸಿಬ್ಬಂದಿಗಳ ಹುದ್ದೆಗಳನ್ನು ಎಷ್ಟು ದಿವಸಗಳಲ್ಲಿ ತುಂಬಲಾಗುವುದು ?

## ಗೃಹ ಇಲಾಖೆಯ ಪೊಲೀಸರ ಬೇಡಿಕೆ ಈಡೇರಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೧೧ (೯೮೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ಪೊಲೀಸ್ ಇಲಾಖೆಗೆ ಹಲವಾರು ಬೇಡಿಕೆಗಳನ್ನು ಮುಂದಿಟ್ಟು ಮುಷ್ಕರ ನಡೆಸಲು ಉದ್ದೇಶಿಸಿದ ಸಂದರ್ಭದಲ್ಲಿ ಅಮಾನತ್ತುಗೊಂಡ ಹಾಗೂ ಸೇವೆಯಿಂದ ವಜಾಗೊಳಿಸಲಾದ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳೆಷ್ಟು ; (ಹೆಸರು, ಹುದ್ದೆ ಹಾಗೂ ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಪೊಲೀಸರ ನ್ಯಾಯಯುತವಾದ ಬೇಡಿಕೆಗಳ ಕುರಿತು ರಚಿಸಲಾದ ಔರಾದ್ಕರ್ ಸಮಿತಿ ನೀಡಿರುವ ವರದಿಯ ಮುಖ್ಯಾಂಶವೇನು ; ವರದಿಯಲ್ಲಿನ ಯಾವ ಅಂಶಗಳನ್ನು ಈಗಾಗಲೇ ಈಡೇರಿಸಲಾಗಿದೆ ; ಉಳಿದ ಶಿಫಾರಸ್ಸುಗಳನ್ನು ಯಾವ ಕಾಲಮಿತಿಯೊಳಗೆ ಜಾರಿಗೆ ತರಲಾಗುವುದು ;

(ಇ) ಪೊಲೀಸರು ತಮ್ಮ ನ್ಯಾಯಯುತವಾದ ಬೇಡಿಕೆಗಾಗಿ ಪ್ರತಿಭಟನೆ ನಡೆಸಲು ಮುಂದಾಗಿದ್ದು, ಯಾವುದೇ ಮುಷ್ಕರ ಅಥವಾ ಪ್ರತಿಭಟನೆ ನಡೆಸದಿದ್ದಾಗ್ಯೂ ನೌಕರರನ್ನು ಗುರಿಯಾಗಿಸಿಕೊಂಡು ಅಮಾನತ್ತು ಮತ್ತು ಸೇವೆಯಿಂದ ವಜಾಗೊಳಿಸುವುದು ಸರಿಯೇ ;

(ಈ) ಸಾಮಾಜಿಕ ನ್ಯಾಯದ ದೃಷ್ಟಿಯಿಂದ ಅಮಾನತ್ತುಗೊಂಡ ಮತ್ತು ಸೇವೆಯಿಂದ ವಜಾಗೊಂಡ ಪೊಲೀಸ್ ಸಿಬ್ಬಂದಿಗಳ ಪುನರ್ ನೇಮಕಾತಿ ಕುರಿತು ಸರ್ಕಾರದ ನಿಲುವೇನು ; ಈ ಬಗ್ಗೆ ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ ?

## ಪೊಲೀಸ್ ಇಲಾಖೆ ಆಧುನೀಕರಣ ಮತ್ತು ವಸತಿ ಗೃಹ ಹೆಚ್ಚಳದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೧೭೨ (೧೮೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸಕ್ತ ಕಾರ್ಯನಿರ್ವಹಿಸುತ್ತಿರುವ ವಿವಿಧ ಶ್ರೇಣಿಯ ಪೊಲೀಸ್ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು–ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರಸಕ್ತ ಪೊಲೀಸ್ ಸಿಬ್ಬಂದಿಗಳಿಗೆ ನೀಡುತ್ತಿರುವ ವೇತನ ಭತ್ಯೆ ಮತ್ತು ಇತರ ಸೌಲಭ್ಯಗಳೇನು ; (ಹುದ್ದೆವಾರು ವಿವರ ನೀಡುವುದು)

(ಇ) ರಾಜ್ಯದ ಪೊಲೀಸ್ ಇಲಾಖೆಯಲ್ಲಿನ ಅಧಿಕಾರಿಗಳಿಗೆ/ಸಿಬ್ಬಂದಿಗಳಿಗಾಗಿ ಲಭ್ಯವಿರುವ ವಸತಿಗೃಹಗಳ ಸಂಖ್ಯೆಯೆಷ್ಟು ; (ವಿವರ ನೀಡುವುದು)

(ಈ) ಪೊಲೀಸ್ ವಸತಿಗೃಹಗಳ ಕೊರತೆ, ಮೂಲ ಸೌಕರ್ಯವಿಲ್ಲದೇ ಇರುವ ಹಳೆಯ ವಸತಿ ಗೃಹಗಳನ್ನು ಉನ್ನತೀಕರಿಸುವುದು ಸೇರಿದಂತೆ ಪೊಲೀಸ್ ಸಿಬ್ಬಂದಿಗಳ ಹಿತ ಕಾಪಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಉ) ಪೊಲೀಸ್ ಸಿಬ್ಬಂದಿಗಳಿಗೆ ಉತ್ತಮ ಗುಣಮಟ್ಟದ ಪರಿಕರ, ಆಯುಧ ನೀಡುವುದರೊಂದಿಗೆ ಇಲಾಖೆಯ ಆಧುನೀಕರಣಕ್ಕೆ ಸರ್ಕಾರದ ಮುಂದಿರುವ ಯೋಜನೆಗಳೇನು ; ಯಾವಾಗ ಅನುಷ್ಠಾನಗೊಳಿಸಲಾಗುವುದು ? (ವಿವರ ನೀಡುವುದು)

## ಅಕ್ರಮ ಮದ್ಯ ಮಾರಾಟ ಹಾಗೂ ಅಬಕಾರಿ ಕಾಯಿದೆ ಉಲ್ಲಂಘನೆ ನಿಯಂತ್ರಣದ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೧೩ (೯೮೬) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಅಬಕಾರಿ ಕಾಯಿದೆ ಉಲ್ಲಂಘನೆಗೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳೆಷ್ಟು ; (ಜಿಲ್ಲಾವಾರು–ತಾಲ್ಲೂಕುವಾರು ವಿವರ ನೀಡುವುದು)

(ಆ) ಅಬಕಾರಿ ಕಾಯಿದೆ ಉಲ್ಲಂಘನೆಗೆ ಸಂಬಂಧಿಸಿದಂತೆ ಕಳೆದ ೩ ವರ್ಷಗಳಲ್ಲಿ ವಿಧಿಸಿದ – ವಸೂಲಾದ ದಂಡದ ಮೊತ್ತವೆಷ್ಟು ; (ಜಿಲ್ಲೆ, ತಾಲ್ಲೂಕು, ವರ್ಷವಾರು ವಿವರ ನೀಡುವುದು)

(ಇ) ಗ್ರಾಮೀಣ ಪ್ರದೇಶಗಳಲ್ಲಿ ಅಕ್ರಮ ಸಾರಾಯಿ ಮಾರಾಟ ಹಾಗೂ ಅಂಗಡಿಗಳಲ್ಲಿ ಅಕ್ರಮ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಸಕಾಲ ಸೇವೆಯನ್ನು ಪ್ರತಿಯೊಂದು ಇಲಾಖೆಯ ಎಲ್ಲಾ ಸೇವೆಗಳಿಗೆ ವಿಸ್ತರಿಸುವ ಕುರಿತು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೧೪ (೯೮೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಯಾವ ಸರ್ಕಾರಿ ಇಲಾಖೆ/ನಿಗಮ/ಸಂಸ್ಥೆಗಳ ಒಟ್ಟು ಎಷ್ಟು ಸೇವೆಗಳನ್ನು ಸಕಾಲ ವ್ಯಾಪ್ತಿಗೆ ತರಲಾಗಿದೆ ; (ಇಲಾಖಾವಾರು ವಿವರ ನೀಡುವುದು)

(ಆ) ಇನ್ನೂ ಯಾವ ಯಾವ ಸರ್ಕಾರಿ ಇಲಾಖೆ/ನಿಗಮ/ಸಂಸ್ಥೆಗಳ ಯಾವ ಸೇವೆಗಳನ್ನು ಸಕಾಲ ವ್ಯಾಪ್ತಿಗೆ ತರಲು ಉದ್ದೇಶಿಸಲಾಗಿದೆ ;

(ಇ) ಕಳೆದ ೩ ವರ್ಷಗಳಲ್ಲಿ ಸಕಾಲದಲ್ಲಿ ಸೇವಾ ವಿಳಂಬದಿಂದ ಒಟ್ಟು ಎಷ್ಟು ಸಂಖ್ಯೆಯ ಸರ್ಕಾರಿ ನೌಕರರಿಂದ ಎಷ್ಟು ಮೊತ್ತದ ದಂಡ ವಸೂಲಿ ಮಾಡಲಾಗಿದೆ ; (ವರ್ಷಾವಾರು, ಇಲಾಖಾವಾರು ವಿವರ ನೀಡುವುದು)

(ಈ) ಸಚಿವಾಲಯ/ನಿರ್ದೇಶನಾಲಯಗಳಲ್ಲಿ ಸಕಾಲ ವ್ಯಾಪ್ತಿಗೆ ಒಳಪಡುವ ಸೇವೆಗಳಾವುವು ; ಸಚಿವಾಲಯಗಳಲ್ಲಿ ಹಾಗೂ ನಿರ್ದೇಶನಲಯಗಳಲ್ಲಿ ಕಡತ ವಿಲೇವಾರಿ ಹಾಗೂ ಸಾಮಾನ್ಯ ಪತ್ರಗಳನ್ನು ಸಕಾಲ ವ್ಯಾಪ್ತಿಗೆ ತರುವುದರಿಂದ ನಿಷ್ಕ್ರಿಯ ಆಡಳಿತಕ್ಕೆ ಚುರುಕು ಮುಟ್ಟಿಸಬಹುದು ಎನ್ನುವುದು ಸರ್ಕಾರದ ಗಮನಕ್ಕಿಲ್ಲವೇ ; ಈ ಬಗ್ಗೆ ಸರ್ಕಾರದ ನಿಲುವೇನು ;

(ಉ) ರಾಜ್ಯದ ಪ್ರತಿ ಇಲಾಖೆಯ ಪ್ರತಿಯೊಂದು ಕಛೇರಿಯ ಪ್ರತಿಯೊಂದು ಸೇವೆ, ಕಡತ ವಿಲೇವಾರಿಗಳನ್ನು ಸಕಾಲ ವ್ಯಾಪ್ತಿಗೆ ತಂದು ಆಡಳಿತದಲ್ಲಿ ಚುರುಕು, ಪಾರದರ್ಶಕತೆ ಹಾಗೂ ಭ್ರಷ್ಟಾಚಾರವನ್ನು ನಿಯಂತ್ರಿಸುವ ಕುರಿತು ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ ; ಈ ಬಗ್ಗೆ ಸರ್ಕಾರದ ನಿಲುವೇನು ?

## ಸ್ಮಾರ್ಟ್‌ಸಿಟಿ ಯೋಜನೆ ಅನುಷ್ಠಾನಕ್ಕಾಗಿ ಹೈ–ಪವರ್ ಕಮಿಟಿ ನೇಮಕದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೧೫ (೯೮೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ್ಯಾವ ನಗರಗಳು ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ ಸ್ಮಾರ್ಟ್‌ಸಿಟಿ ಯೋಜನೆಗೆ ಆಯ್ಕೆಯಾಗಿವೆ ; (ವಿವರ ನೀಡುವುದು)

(ಆ) ಸ್ಮಾರ್ಟ್‌ಸಿಟಿ ಯೋಜನೆಗೆ ಆಯ್ಕೆಯಾದ ನಗರಗಳಿಗೆ ಮುಂದಿನ ೫ ವರ್ಷಗಳಲ್ಲಿ ಲಭ್ಯವಾಗುವ ನಿರೀಕ್ಷಿತ ಅನುದಾನವೆಷ್ಟು ; ಅದರಲ್ಲಿ ಕೇಂದ್ರ ಮತ್ತು ರಾಜ್ಯ ಸ್ಥಳೀಯ ಸರ್ಕಾರದ ಪಾಲೆಷ್ಟು ;

(ಇ) ಸ್ಮಾರ್ಟ್‌ಸಿಟಿ ಯೋಜನೆಯಡಿ ಕಾರ್ಯಗತಗೊಳ್ಳುವ ಪ್ರಮುಖ ಕೆಲಸ ಕಾರ್ಯಗಳೇನು ; (ಪ್ರಮುಖ ಕಾರ್ಯಕ್ರಮಗಳ ಪಟ್ಟಿಯೊಂದಿಗೆ ಮಂಗಳೂರು ನಗರದಲ್ಲಿ ಕಾರ್ಯಗತಗೊಳ್ಳುವ ಕಾರ್ಯಕ್ರಮಗಳ ಸಮಗ್ರ ವರದಿ ನೀಡುವುದು)

(ಈ) ಸ್ಮಾರ್ಟ್‌ಸಿಟಿ ಅನುಷ್ಠಾನಕ್ಕೆ ರಾಜ್ಯಮಟ್ಟದಲ್ಲಿ ಹೈ–ಪವರ್ ಕಮಿಟಿ ಮತ್ತು ಸ್ಪೆಷಲ್ ಪರ್ಪಸ್ ವೆಹಿಕಲ್ (ಎಸ್.ಪಿ.ವಿ.) ರಚಿಸಲಾಗಿದೆಯೇ ; (ವಿವರ ಒದಗಿಸುವುದು)

(ಉ) ಸ್ಮಾರ್ಟ್‌ಸಿಟಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಯಾವ ಕ್ರಮಕೈಗೊಳ್ಳಲಿದೆ ; ಈ ಸಂಬಂಧ ಅಗತ್ಯ ನೇಮಕಾತಿ ಹಾಗೂ ಸಮಿತಿಗಳನ್ನು ಯಾವಾಗ ರಚಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಬಳ್ಳಾರಿ ಮಹಾನಗರ ಪ್ರದೇಶಾಭಿವೃದ್ಧಿ ಯೋಜನೆಗಳು

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೧೬ (೧೦೦೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಬಾದ್–ಕರ್ನಾಟಕ ಬಳ್ಳಾರಿ ಮಹಾನಗರ ಪ್ರದೇಶದ ಸಮಗ್ರ ಅಭಿವೃದ್ಧಿಗಾಗಿ ನಗರಾಭಿವೃದ್ಧಿ ಇಲಾಖೆಯವರು ಹಮ್ಮಿಕೊಂಡು ಜಾರಿಗೊಳಿಸಿರುವ ಯೋಜನಾ ವಿವರಗಳು ಯಾವುವು ;

(ಆ) ಕುಡಿಯುವ ನೀರು, ಸಮರ್ಪಕ ಒಳಚರಂಡಿ ವ್ಯವಸ್ಥೆ ಹಾಗೂ ರಸ್ತೆಗಳ ಅಭಿವೃದ್ಧಿ ಕಾರ್ಯಕ್ರಮಗಳಿಗಾಗಿ ಒದಗಿಸಿಕೊಟ್ಟಿರುವ ಅನುದಾನದ ವಿವರಗಳು ಮತ್ತು ಕೇಂದ್ರಾನುದಾನದ ಯೋಜನೆಗಳ ಕುರಿತ ವಿವರಗಳೇನು ;

(ಇ) ಬಳ್ಳಾರಿ ನಗರ ಪ್ರದೇಶದಲ್ಲಿ ರಸ್ತೆ ಸಂಪರ್ಕ ಮತ್ತು ಅವುಗಳ ಉನ್ನತೀಕರಣಕ್ಕಾಗಿ ರೂಪಿಸಿರುವ ಕ್ರಿಯಾ ಯೋಜನೆಗಳೇನು ?

## ಬೆಂಗಳೂರು ನಗರದಲ್ಲಿ ಅನುಮತಿ ರಹಿತ ಪೇಯಿಂಗ್ ಗೆಸ್ಟ್ ಬಗ್ಗೆ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೧೭ (೯೯) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೇಯಿಂಗ್ ಗೆಸ್ಟ್ ನಡೆಸುವವರಿಗೆ ಪರವಾನಗಿ ನೀಡುವ ನಿಟ್ಟಿನಲ್ಲಿ ಸರ್ಕಾರ ವಿಧಿಸಿರುವ ಮಾರ್ಗಸೂಚಿಗಳೇನು ;

(ಆ) ಪರವಾನಗಿ ಪಡೆಯದೇ ನಡೆಸುತ್ತಿರುವ ಪೇಯಿಂಗ್ ಗೆಸ್ಟ್‌ಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಪರವಾನಗಿ ಪಡೆಯದೇ ನಡೆಯುತ್ತಿರುವ ಪೇಯಿಂಗ್ ಗೆಸ್ಟ್ ಕಟ್ಟಡಗಳಲ್ಲಿ ಮಹಿಳೆಯರ ಸುರಕ್ಷತೆಗೆ ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ಸುರಕ್ಷತಾ ಕ್ರಮಗಳಿದ್ದರೂ ಸಂಭವಿಸಿರುವ ಅಪರಾಧ ಪ್ರಕರಣಗಳ ಸಂಖ್ಯೆಗಳೆಷ್ಟು ; ಅಪರಾಧ ತಡೆಗಾಗಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ?

## ರಾಜ್ಯ ಸರ್ಕಾರ ಟಿಪ್ಪು ಜಯಂತಿ ಆಚರಿಸಲು ಇರುವ ಕಾರಣಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೯೧೮ (೧೧೪೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ಜನಾಕ್ರೋಶದ ವಿರುದ್ಧ ನಿರ್ಣಯಿಸಿರುವ ಟಿಪ್ಪು ಜಯಂತಿ ಆಚರಿಸಲು ಇರುವ ಐತಿಹಾಸಿಕ ಕಾರಣಗಳೇನು ;

(ಆ) ಟಿಪ್ಪು ಮತ್ತು ಆತ ನಡೆಸಿದ ಕ್ರೌರ್ಯ, ಮತಾಂತರ, ಹಿಂದೂ ಮತ್ತು ಕ್ರೈಸ್ತ ಜನಾಂಗದ ಮಾರಣ ಹತ್ಯೆ, ಅತ್ಯಾಚಾರ ಹಾಗೂ ಸಮಾಜ ಘಾತುಕ ಘಟನೆಗಳ ಕುರಿತು ಐತಿಹಾಸಿಕ ದಾಖಲೆಗಳು ಲಭ್ಯವಿದ್ದರೂ ಮತ್ತು ಆತ ೧೮೫೭ಕ್ಕಿಂತಲೂ ಪೂರ್ವದಲ್ಲಿ ತನ್ನ ಸಂಸ್ಥಾನದ ಉಳುವಿಗಾಗಿ ಬ್ರಿಟಿಷ್ ಸರ್ಕಾರದ ವಿರುದ್ಧ ಹೋರಾಡಲು ಪೋರ್ಚುಗೀಸರ ಸಹಾಯ ಪಡೆದಿದ್ದರೂ ಆತನನ್ನು ಸ್ವಾತಂತ್ರ್ಯ ಹೋರಾಟಗಾರ ಎಂದು ಬಿಂಬಿಸಲು ಕಾರಣವೇನು? (ಭಾರತದ ಮೊದಲನೇ ಸಂಘಟಿತ ಸ್ವಾತಂತ್ರ್ಯ ಹೋರಾಟ ನಡೆದಿದ್ದು ೧೮೫೭ರಲ್ಲಿ, ಟಿಪ್ಪು ಬದುಕಿದ್ದು ೧೭೫೦ ರಿಂದ ೧೭೯೯)

## ಬೆಂಗಳೂರು ನಗರದಲ್ಲಿ ಕೊಳಚೆ ನೀರಿನ ಸಂಸ್ಕರಣೆ ಹಾಗೂ ಸದ್ಬಳಕೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೯೧೯ (೧೧೪೧) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಪ್ರತಿನಿತ್ಯ ಉಪಯೋಗಿಸುವ ಕೊಳಚೆ ನೀರಿನ ಪ್ರಮಾಣ ಎಷ್ಟು ;

(ಆ) ಇದರಲ್ಲಿ ಪೂರ್ಣ ಪ್ರಮಾಣದ ನೀರನ್ನು ಸಂಸ್ಕರಿಸಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಕೊಳಚೆ ನೀರನ್ನು ಪೂರ್ಣ ಪ್ರಮಾಣದಲ್ಲಿ ಸಂಸ್ಕರಣೆಗೊಳಿಸದಿರಲು ಕಾರಣವೇನು ;

(ಈ) ದೊಡ್ಡ ಪ್ರಮಾಣದಲ್ಲಿ ಕೊಳಚೆ ನೀರಿನ ಸಂಸ್ಕರಣೆ ಹಾಗೂ ಸದ್ಬಳಕೆಗಾಗಿ ಸರ್ಕಾರ ಏನು ಕ್ರಮಗಳನ್ನು ಕೈಗೊಂಡಿದೆ ?

## ರಾಜ್ಯದಲ್ಲಿ ಮದ್ಯ ಮಾರಾಟ ನಿರ್ಬಂಧಿಸುವ ಯೋಜನೆ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೯೨೦ (೧೧೩೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಮದ್ಯದ ಅಂಗಡಿಗಳು ಎಷ್ಟು ;

(ಆ) ಹೊಸ ಲೈಸೆನ್ಸ್ ಕೊಡುವುದನ್ನು ಯಾವ ವರ್ಷದಿಂದ ನಿಲ್ಲಿಸಲಾಗಿದೆ ;

(ಇ) ಈ ಲೈಸೆನ್ಸ್‌ಗಳ ನವೀಕರಣದಿಂದ ರಾಜ್ಯದ ಬೊಕ್ಕಸಕ್ಕೆ ವರ್ಷಾವಾರು ಎಷ್ಟು ಆದಾಯ ಬರುತ್ತದೆ ;

(ಈ) ಮದ್ಯ ಮಾರಾಟದಿಂದ ರಾಜ್ಯದ ಬೊಕ್ಕಸಕ್ಕೆ ಕಳೆದ ಮೂರು ವರ್ಷಗಳಲ್ಲಿ ಬಂದ ಆದಾಯವೆಷ್ಟು ;

(ಉ) ದೇಶದ ಬೇರೆ ಬೇರೆ ರಾಜ್ಯಗಳಲ್ಲಿ ಜಾರಿಗೆ ತಂದಿರುವಂತೆ ಮದ್ಯ ಮಾರಾಟ ನಿರ್ಬಂಧಿಸುವ ಯೋಚನೆ ಸರ್ಕಾರಕ್ಕೆ ಇದೆಯೇ ?

## ನಗರೋತ್ಥಾನ ಹಂತ–೩ರ ಯೋಜನೆಯ ಅನುಷ್ಠಾನದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ ) –**

೯೨೧ (೧೧೪೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರೋತ್ಥಾನ ಯೋಜನೆ ಹಂತ–೩ ಅನ್ನು ರಾಜ್ಯದ ಯಾವ ಯಾವ ಮಹಾನಗರ ಪಾಲಿಕೆಗಳಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ ; (ವಿವರ ನೀಡುವುದು)

(ಆ) ಈ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಮಹಾನಗರ ಪಾಲಿಕೆಗಳಿಗೆ ಬಿಡುಗಡೆಯಾದ ಹಣ ಎಷ್ಟು ; (ವಿವರ ನೀಡುವುದು)

(ಇ) ೩ನೇ ಹಂತದ ನಗರೋತ್ಥಾನ ಯೋಜನೆಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ?

## ರಾಜ್ಯದಲ್ಲಿರುವ ಅಬಕಾರಿ ಅಂಗಡಿಗಳ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೯೨೨ (೧೨೬೦) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರದಿಂದ ನಡೆಸುತ್ತಿರುವ ಅಬಕಾರಿ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ಪ್ರತಿ ಗ್ರಾಮ ಪಂಚಾಯಿತಿಗೆ ಒಂದರಂತೆ ಹೊಸ ಅಬಕಾರಿ ಅಂಗಡಿಗಳನ್ನು ತೆರೆಯುವ ಆಲೋಚನೆ ಸರ್ಕಾರಕ್ಕಿದೆಯೇ ;

(ಇ) ಪ್ರತಿ ವರ್ಷ ಅಬಕಾರಿ ಇಲಾಖೆಗೆ ಬರುತ್ತಿರುವ ಆದಾಯವೆಷ್ಟು ;

(ಈ) ಈ ವರ್ಷ ಅಬಕಾರಿ ಸುಂಕವನ್ನು ಹೆಚ್ಚಿಗೆ ಮಾಡುವ ಆಲೋಚನೆ ಇದೆಯೇ ?

## ಅಪಘಾತ ವಾಹನಗಳಿಗೆ ಪ್ರತ್ಯೇಕ ಜಾಗ ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೯೨೩ (೧೨೬೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದ ಅನೇಕ ಮುಖ್ಯ ದಾರಿಯಲ್ಲಿರುವ ಪೊಲೀಸ್ ಠಾಣೆ ವ್ಯಾಪ್ತಿಯ ಮುಖ್ಯ ರಸ್ತೆಗಳಲ್ಲಿ ಅಪಘಾತವಾಗಿರುವ ವಾಹನಗಳನ್ನು ವರ್ಷಗಟ್ಟಲೇ ಪ್ರದರ್ಶನ ಮಾಡುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಆ) ಸಾರ್ವಜನಿಕರು ಹಾಗೂ ಪ್ರವಾಸಿಗರು ಓಡಾಡುವ ಮುಖ್ಯ ರಸ್ತೆಗಳಲ್ಲಿ ನಿಲ್ಲಿಸಿ, ನಗರದ ಸೌಂದರ್ಯ ಹಾಳು ಮಾಡುವ ಬದಲಾಗಿ ಬೇರೆ ಪ್ರತ್ಯೇಕ ಜಾಗದಲ್ಲಿ ಅಪಘಾತ ವಾಹನಗಳನ್ನು ನಿಲ್ಲಿಸಲು ಸರ್ಕಾರ ಕೂಡಲೇ ಕ್ರಮ ಕೈಗೊಳ್ಳುವುದೇ ? (ಉದಾ:– ಮಲ್ಲೇಶ್ವರಂ ಪೊಲೀಸ್ ಠಾಣೆ ಮುಂಭಾಗ ಇರುವ ಅಪಘಾತ ವಾಹನಗಳು)

## ಹಿರಿಯ ನಾಗರಿಕರ ವಯಸ್ಸನ್ನು ೬೦ಕ್ಕೆ ಇಳಿಸಿರುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) –**

೯೨೪ (೧೨೫೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿರಿಯ ನಾಗರಿಕರ ವಯಸ್ಸು ೬೫ ರಿಂದ ೬೦ಕ್ಕೆ ಯಾವಾಗ ಇಳಿಸಲಾಯಿತು ; ಎಂದಿನಿಂದ ಜಾರಿಗೆ ಬಂದಿದೆ ; (ಆದೇಶ ಮಾಡಿದ ವಿವರ ನೀಡುವುದು)

(ಆ) ರಾಜ್ಯ ಸರ್ಕಾರದ ನೌಕರರ ನಿವೃತ್ತಿ ವಯಸ್ಸನ್ನು ೬೦ ರಿಂದ ೬೫ ವರ್ಷದವರೆಗೆ ಏರಿಸುವ ಬಗ್ಗೆ ಸರ್ಕಾರ ಚಿಂತಿಸಿದೆಯೇ ;

(ಇ) ಹಾಗಿದ್ದಲ್ಲಿ, ಇದನ್ನು ಯಾವಾಗ ಜಾರಿಗೆ ತರಲಾಗುವುದು ?

## ಚಾಮರಾಜನಗರ ಒಳಚರಂಡಿ ಯೋಜನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೨೫ (೧೦೦೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಒಳಚರಂಡಿ ಯೋಜನೆ ಯಾವಾಗ ಪ್ರಾರಂಭವಾಯಿತು ; ಯಾವಾಗ ಮುಗಿಯಬೇಕಾಗಿತ್ತು ; ಎಷ್ಟು ಬಾರಿ ಕಾಮಗಾರಿ ಮುಕ್ತಾಯದ ಅವಧಿಯನ್ನು ಮುಂದೂಡಲಾಗಿದೆ ;

(ಆ) ಈ ಕಾಮಗಾರಿ ಯಾವ ಹಂತದಲ್ಲಿದೆ ; ಇದುವರೆಗೆ ಪೂರ್ಣಗೊಂಡಿರುವ ಕಾಮಗಾರಿಗಳು ಯಾವುವು ; ಚಾಲ್ತಿಯಲ್ಲಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿ ಯಾವಾಗ ಪೂರ್ಣಗೊಳ್ಳುವುದು ;

(ಇ) ಈ ಕಾಮಗಾರಿಗಾಗಿ ಅಗೆದಿರತಕ್ಕ ರಸ್ತೆಗಳನ್ನು ಸರಿಪಡಿಸದೇ ಇಡೀ ನಗರದ ವಾತಾವರಣ ಧೂಳಿನಿಂದ ಮಾಲಿನ್ಯವಾಗಿ ಜನರಿಗೆ ಅಂಗಡಿ ಮುಂಗಟ್ಟಿನವರಿಗೆ ಬಹಳ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಾಲಾ ವಾಹನಗಳ ಸುರಕ್ಷತೆಯ ಬಗ್ಗೆ

**ಶ್ರೀ ಕೆ.ವಿ. ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೯೨೬ (೧೦೦೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಶಾಲಾ ವಾಹನಗಳು ಅಪಘಾತಕ್ಕೆ ಒಳಗಾಗಿರುವ ಪ್ರಕರಣಗಳೆಷ್ಟು ; (೨೦೧೩ ರಿಂದ ಇಲ್ಲಿಯವರೆಗೆ ಮಾಹಿತಿ ನೀಡುವುದು)

(ಆ) ಸದರಿ ಪ್ರಕರಣಗಳಲ್ಲಿ ಗಾಯಗೊಂಡ, ಮೃತರಾದ ಮಕ್ಕಳ ಸಂಖ್ಯೆಯೆಷ್ಟು ;

(ಇ) ಶಾಲಾ ವಾಹನಗಳ ಚಾಲಕರು ಮದ್ಯಪಾನ ಮಾಡಿ, ವಾಹನ ಚಲಾಯಿಸುತ್ತಿರುವುದು ಸಂಚಾರ ಸಿಬ್ಬಂದಿಯ ತಪಾಸಣೆಯ ಸಮಯದಲ್ಲಿ ಪತ್ತೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಂತಹ ಚಾಲಕರು ಮತ್ತು ಸಂಬಂಧಿಸಿದ ಶೈಕ್ಷಣಿಕ ಸಂಸ್ಥೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಶಾಲೆಗಳಲ್ಲಿ ಸಿ.ಸಿ.ಟಿವಿ ಕ್ಯಾಮರಾ ಕಡ್ಡಾಯಗೊಳಿಸುವ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೨೭ (೯೮೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಎಷ್ಟು ಶಾಲೆಗಳಲ್ಲಿ ಸಿ.ಸಿ.ಟಿವಿ ಕ್ಯಾಮರಾ ಅಳವಡಿಸಲಾಗಿದೆ ; (ಠಾಣಾವಾರು ವಿವರ ಒದಗಿಸುವುದು)

(ಆ) ಪೂರ್ಣ ಪ್ರಮಾಣದ ಸಿ.ಸಿ. ಕ್ಯಾಮರಾ ಅಳವಡಿಸದ ಶಾಲೆಗಳ ವಿರುದ್ಧ ಕಾನೂನು ಸುವ್ಯವಸ್ಥೆ ಅನುಷ್ಠಾನಗೊಳಿಸುವ ಪೊಲೀಸ್ ಇಲಾಖೆಗೆ ಕಡ್ಡಾಯಗೊಳಿಸಬೇಕಾದ ಅಧಿಕಾರ ಒದಗಿಸಲಾಗಿದೆಯೇ ; ಇಲ್ಲವಾದಲ್ಲಿ, ಈ ಬಗ್ಗೆ ನಿಯಂತ್ರಣಕ್ಕೆ ಪಡೆಯಲು ಕ್ರಮಕೈಗೊಳ್ಳಲಾಗುವುದೇ ?

## ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳ್ಳತನ ಪ್ರಕರಣ ಪತ್ತೆ ಹಚ್ಚುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೨೮ (೯೮೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ದಾಖಲಾದ ವಾಹನ ಕಳ್ಳತನ, ಜಾನುವಾರು ಕಳ್ಳತನ, ದೇವಸ್ಥಾನಗಳ ಕಳ್ಳತನ, ದರೋಡೆ ಪ್ರಕರಣಗಳೆಷ್ಟು ; (ವರ್ಷವಾರು, ಠಾಣಾವಾರು ವಿವರ ನೀಡುವುದು) ಇವುಗಳಲ್ಲಿ ಪತ್ತೆ ಹಚ್ಚಲಾದ ಪ್ರಕರಣಗಳು ಎಷ್ಟು ; (ವರ್ಷವಾರು, ಠಾಣಾವಾರು ಮಾಹಿತಿ ನೀಡುವುದು)

(ಆ) ಹೆಚ್ಚುತ್ತಿರುವ ಇಂತಹ ಅಪರಾಧ ಪ್ರಕರಣಗಳಿಗೆ ಸೀಮಿತವಾಗಿ ಜಿಲ್ಲಾ ಮಟ್ಟದಲ್ಲಿ ಆಧುನಿಕ ತಂತ್ರಜ್ಞಾನ (ಮೊಬೈಲ್ ಟವರ್ ಟ್ರೇಸಿಂಗ್) ನುರಿತ

ಪತ್ತೆದಳ ತಂಡವನ್ನು ರಚಿಸುವ ಯೋಜನೆ ಸರ್ಕಾರದ ಮುಂದಿದೆಯೇ ; ಇಲ್ಲವಾದರೆ, ಹೊಸ ಚಿಂತನೆ ಸರ್ಕಾರದ ಮುಂದಿದೆಯೇ ; ಹೌದಾದರೆ, ಯಾವುದು ? (ಜಿಲ್ಲಾವಾರು, ತಾಲ್ಲೂಕುವಾರು, ವರ್ಷವಾರು ವಿವರ ನೀಡುವುದು)

## ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯ ಮದ್ಯಪಾನೀಯ ಮಳಿಗೆಯ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೨೯ (೬೬೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮದ್ಯಪಾನೀಯ ನಿಗಮದಿಂದ ಹೊಸ ಮಳಿಗೆಯನ್ನು ತೆರೆಯಲು ಇರುವ ಮಾರ್ಗಸೂಚಿ ಯಾವುದು ; (ಪ್ರತಿ ಒದಗಿಸುವುದು)

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮದ್ಯಪಾನೀಯ ಮಳಿಗೆಗಳ ಸಂಖ್ಯೆ ಎಷ್ಟು ; ಮಂಜೂರಾತಿಯಾದ ಮಳಿಗೆಗಳ ಸಂಖ್ಯೆ ಎಷ್ಟು ; ಇವುಗಳ ಹಂಚಿಕೆಗೆ ಇರುವ ಮಾನದಂಡ ಯಾವುದು ? (ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು)

## ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಐ.ಎ.ಎಸ್., ಐ.ಪಿ.ಎಸ್., ಮತ್ತು ಐ.ಎಫ್.ಎಸ್., ಅಧಿಕಾರಿಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೩೦ (೬೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಐ.ಎ.ಎಸ್., ಐ.ಪಿ.ಎಸ್., ಮತ್ತು ಐ.ಎಫ್.ಎಸ್., ಅಧಿಕಾರಿಗಳ ಸಂಖ್ಯೆ ಎಷ್ಟು ; ಅವರು ಯಾವ ಹುದೆಯಲ್ಲಿ

ಸೇವೆ ಸಲ್ಲಿಸುತ್ತಿದ್ದಾರೆ ; ಅವರು ಸೇವೆಗೆ ಸೇರಿದ ದಿನಾಂಕ ಮತ್ತು ನಿವೃತ್ತಿಯ ದಿನಾಂಕ ಯಾವುದು ; (ಇಲಾಖಾವಾರು, ಹುದ್ದೆವಾರು, ಹೆಸರುವಾರು ಮಾಹಿತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಐ.ಎ.ಎಸ್., ಐ.ಪಿ.ಎಸ್., ಮತ್ತು ಐ.ಎಫ್.ಎಸ್., ಅಧಿಕಾರಿಗಳಲ್ಲಿ ನೇರ ನೇಮಕಾತಿ ಹೊಂದಿದವರ ಮತ್ತು ಬಡ್ತಿಯಿಂದ ಸ್ಥಾನ ಪಡೆದವರ ಸಂಖ್ಯೆ ಎಷ್ಟು ; (ಇಲಾಖಾವಾರು, ಹುದ್ದೆವಾರು, ಹೆಸರುವಾರು ಮಾಹಿತಿಯನ್ನು ಒದಗಿಸುವುದು)

(ಇ) ಪ್ರಸ್ತುತ ಸೇವೆ ಸಲ್ಲಿಸುತ್ತಿರುವ ಐ.ಎ.ಎಸ್., ಐ.ಪಿ.ಎಸ್., ಮತ್ತು ಐ.ಎಫ್.ಎಸ್., ಅಧಿಕಾರಿಗಳಲ್ಲಿ ಇಲಾಖಾ ತನಿಖೆ ದಾಖಲಾಗಿರುವವರ ಸಂಖ್ಯೆ ಎಷ್ಟು ; ಕ್ರಿಮಿನಲ್ ಪ್ರಕರಣ ದಾಖಲಾಗಿರುವವರ ಸಂಖ್ಯೆ ಎಷ್ಟು ;  ಅವರ ವಿರುದ್ಧ ಜರುಗಿಸಿದ ಕ್ರಮದ ಮಾಹಿತಿ ನೀಡುವುದು? (ಹುದ್ದೆವಾರು, ಹೆಸರುವಾರು, ಇಲಾಖಾ ತನಿಖಾವಾರು ಮಾಹಿತಿಯನ್ನು ನೀಡುವುದು)

## ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಗ್ರೂಪ್ ‘ಎ’ ಮತ್ತು ‘ಬಿ’ ಶ್ರೇಣಿಯ ಅಧಿಕಾರಿಗಳ ಬಗ್ಗೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೩೧ (೯೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸೇವೆ ಸಲ್ಲಿಸುತ್ತಿರುವ ಕೆ.ಎ.ಎಸ್., ಕೆ.ಪಿ.ಎಸ್.,ನಂತಹ ಗ್ರೂಪ್ ಎ ಮತ್ತು ಬಿ ಅಧಿಕಾರಿಗಳ ಸಂಖ್ಯೆ ಎಷ್ಟು ; ಅವರು ಯಾವ ಹುದ್ದೆಯಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ ; ಅವರು ಸೇವೆಗೆ ಸೇರಿದ ದಿನಾಂಕ ಮತ್ತು ನಿವೃತ್ತಿಯ ದಿನಾಂಕ ಯಾವುದು ; ಇವರಲ್ಲಿ ನೇರ ನೇಮಕಾತಿ ಹೊಂದಿದವರ ಮತ್ತು ಬಡ್ತಿಯಿಂದ ಸ್ಥಾನ ಪಡೆದವರ ಸಂಖ್ಯೆ ಎಷ್ಟು ; (ಇಲಾಖಾವಾರು, ಹುದ್ದೆವಾರು, ಹೆಸರುವಾರು ಮಾಹಿತಿ ಒದಗಿಸುವುದು)

(ಆ) ಈ ಅಧಿಕಾರಿಗಳಲ್ಲಿ ಇಲಾಖಾ ತನಿಖೆ ದಾಖಲಾಗಿರುವವರ ಮತ್ತು ನಡೆಸಲಾಗಿರುವವರ ಸಂಖ್ಯೆ ಎಷ್ಟು ; ಕ್ರಿಮಿನಲ್ ಪ್ರಕರಣ ದಾಖಲಾಗಿರುವವರ ಸಂಖ್ಯೆ ಎಷ್ಟು ; ಅವರ ವಿರುದ್ಧ ಜರುಗಿಸಿದ ಕ್ರಮವೇನು? (ಹುದ್ದೆವಾರು ಹೆಸರುಗಳು, ಇಲಾಖಾ ತನಿಖಾವಾರು ಮಾಹಿತಿಯನ್ನು ನೀಡುವುದು)

## ಅಪಾಯಕಾರಿ ಡಾಲ್ಡಾ ತಯಾರಿಕಾ ಘಟಕಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೬೩೨ (೧೧೫೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಾಣಿಗಳ ಮೂಳೆಯಿಂದ ಅಪಾಯಕಾರಿ ಡಾಲ್ಡಾ ತಯಾರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಪಾಯಕಾರಿ ಡಾಲ್ಡಾ ತಯಾರಿಕೆಗೆ ಯಾವ ಪ್ರಾಣಿಯ ಮೂಳೆ ಬಳಕೆಯಾಗುತ್ತದೆ ; ಈ ಅಪಾಯಕಾರಿ ಡಾಲ್ಡಾ ಬಳಕೆಯಿಂದ ಅಡ್ಡ ಪರಿಣಾಮಗಳಾವುವು ;

(ಇ) ಇದನ್ನು ರಾಜ್ಯದ ಯಾವ ಭಾಗಗಳಲ್ಲಿ ತಯಾರಿಸಲಾಗುತ್ತಿದೆ ಎಂಬುದನ್ನು ಪತ್ತೆ ಹಚ್ಚಲಾಗಿದೆಯೇ ;

(ಈ) ಪೊಲೀಸ್ ಇಲಾಖೆಯು ಈ ತಯಾರಿಕಾ ಘಟಕಗಳ ಮೇಲೆ ಎಲ್ಲೆಲ್ಲಿ ದಾಳಿ ಮಾಡಿ ಜಪ್ತಿ ಮಾಡಿರುತ್ತದೆ ; (ದಿನಾಂಕ ಮತ್ತು ಸ್ಥಳದೊಂದಿಗೆ ಮಾಹಿತಿ ನೀಡುವುದು) ಇದಕ್ಕೆ ಸಂಬಂಧಿಸಿದಂತೆ ಎಷ್ಟು ಜನರನ್ನು ಬಂದಿಸಲಾಗಿದೆ ಹಾಗೂ ಇವರುಗಳ ವಿರುದ್ಧ ಏನು ಕ್ರಮ ಕೈಗೊಳ್ಳಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ಕಾರಾಗೃಹ ಸ್ಥಳಾಂತರಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೯೩೩ (೯೯೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ವಿಶೇಷ ಸ್ಥಾನಮಾನದ ಅಡಿಯಲ್ಲಿ ೩೭೧(ಜೆ) ಕಲಂ ಪ್ರಕಾರ ಗೃಹ ಇಲಾಖೆಯಿಂದ ಭರ್ತಿ ಮಾಡಿರುವ ಹುದ್ದೆಗಳೆಷ್ಟು ;

(ಆ) ಬಾಕಿ ಉಳಿದಿರುವ ಹುದ್ದೆಗಳೆಷ್ಟು ; ಅವುಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಬೀದರ್ ನಗರದ ಹೃದಯ ಭಾಗದಲ್ಲಿರುವ ಜಿಲ್ಲಾ ಕಾರಾಗೃಹವನ್ನು ಸ್ಥಳಾಂತರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಕಾರಾಗೃಹವನ್ನು ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿ ನೀಡುವುದು)

## ಸಿ.ಸಿ. ಕ್ಯಾಮರಾಗಳನ್ನು ಅಳವಡಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) –**

೯೩೪ (೯೯೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆಯಿಂದ ನಿರ್ವಹಿಸಲ್ಪಡುತ್ತಿರುವ ಸಿ.ಸಿ. ಕ್ಯಾಮರಾಗಳ ಸಂಖ್ಯೆ ಎಷ್ಟು ಮತ್ತು ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿ.ಸಿ. ಕ್ಯಾಮರಾಗಳ ಸಂಖ್ಯೆ ಎಷ್ಟು ; (ಸ್ಥಳಗಳವಾರು ಮಾಹಿತಿ ಒದಗಿಸುವುದು)

(ಆ) ಸಾರ್ವಜನಿಕ ಹಿತದೃಷ್ಟಿಯಿಂದ, ಸಾರ್ವಜನಿಕ ಸ್ವತ್ತುಗಳ ರಕ್ಷಣೆಗಾಗಿ ಸಾರ್ವಜನಿಕರ ಸ್ಥಳಗಳಲ್ಲಿ, ಸರ್ಕಾರಿ, ಅರೆಸರ್ಕಾರಿ ಮತ್ತು ಸಂಘ ಸಂಸ್ಥೆಗಳಿಗೆ

ಸಿ.ಸಿ. ಕ್ಯಾಮರಾಗಳ ಅಳವಡಿಕೆ ಮತ್ತು ನಿರ್ವಹಣೆಯ ಹೊಣೆಯನ್ನು ವಹಿಸುವ ಚಿಂತನೆಯು ಸರ್ಕಾರಕ್ಕಿದೆಯೇ ; ಇದ್ದಲ್ಲಿ, ಕ್ರಮಕೈಗೊಳ್ಳಲಾಗುವುದೇ ; ಇಲ್ಲವಾದಲ್ಲಿ, ಕಾರಣಗಳೇನು ;

(ಇ) ಪಾರದರ್ಶಕ ಆಡಳಿತಕ್ಕಾಗಿ ಪೊಲೀಸ್ ಠಾಣೆಗಳಲ್ಲಿ ಸಿ.ಸಿ. ಕ್ಯಾಮರಾಗಳನ್ನು ಅಳವಡಿಸಲಾಗಿದೆಯೇ ? (ಅಳವಡಿಸಿದ ಠಾಣೆಗಳ ವಿವರ ನೀಡುವುದು)

## ಮೆಟ್ರೋ ರೈಲು ನಿಲ್ದಾಣಗಳಲ್ಲಿ ವಾಹನ ನಿಲುಗಡೆ ಸಮಸ್ಯೆ ಉಂಟಾಗಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೯೩೫ (೧೨೧೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೈಯಪ್ಪನಹಳ್ಳಿ–ಮೈಸೂರು ರಸ್ತೆ ನಡುವಿನ ಪೂರ್ವ–ಪಶ್ಚಿಮ ಕಾರಿಡಾರ್‌ನಲ್ಲಿ ನಮ್ಮ ಮೆಟ್ರೋ ಸಂಚಾರ ಸೇವೆ ಪ್ರಾರಂಭವಾಗಿ ೨ ತಿಂಗಳಿನಲ್ಲಿಯೇ ನಿರೀಕ್ಷೆಯನ್ನೂ ಮೀರಿ ಪ್ರಯಾಣಿಕರನ್ನು ತನ್ನತ್ತ ಸೆಳೆದಿರುವುದು ನಿಜವೇ ; (ವಿವರ ನೀಡುವುದು)

(ಆ) ನಾಗಸಂದ್ರದಿಂದ ಪುಟ್ಟೇನಹಳ್ಳಿ ಕ್ರಾಸ್‌ವರೆಗಿನ ಉತ್ತರ–ದಕ್ಷಿಣ ಕಾರಿಡಾರ್‌ನ ಪೂರ್ಣ ಮಾರ್ಗದಲ್ಲಿ ರೈಲು ಸಂಚಾರ ಆರಂಭವನ್ನು ಯಾವಾಗ ಮಾಡಲಾಗುವುದು ;

(ಇ) ಮೆಟ್ರೋ ರೈಲು ನಿಲ್ದಾಣಗಳಲ್ಲಿ ವಾಹನ ನಿಲುಗಡೆ ಸಮಸ್ಯೆ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಯಾವ ಯಾವ ಕಡೆಗಳಲ್ಲಿ ವಾಹನ ನಿಲುಗಡೆ ಸಮಸ್ಯೆ ಕಂಡು ಬಂದಿದೆ ; (ವಿವರ ನೀಡುವುದು)

(ಈ) ಈ ಸಂಬಂಧ ಯಾವ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

# ರಾಜ್ಯದ ಮಲ್ಟಿಪ್ಲೆಕ್ಸ್ ಚಿತ್ರ ಮಂದಿರಗಳಲ್ಲಿ ಕನ್ನಡ ಚಲನಚಿತ್ರಗಳನ್ನು ಪ್ರದರ್ಶಿಸುವುದನ್ನು ಕಡ್ಡಾಯಗೊಳಿಸುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೯೩೬ (೧೨೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಚಲನಚಿತ್ರ ಮಂದಿರಗಳಿಗೆ ಸರ್ಕಾರದಿಂದ ಆದಾಯ ತೆರಿಗೆ ಸೇರಿದಂತೆ ಯಾವ ರೀತಿಯ ರಿಯಾಯಿತಿ ಹಾಗೂ ಅನುಕೂಲಗಳನ್ನು ನೀಡಲಾಗುತ್ತಿದೆ ;

(ಆ) ರಾಜ್ಯದ ಚಲನಚಿತ್ರ ಮಂದಿರಗಳಿಗೆ ಕನ್ನಡ ಚಲನಚಿತ್ರಗಳನ್ನು ಪ್ರದರ್ಶಿಸಲು ಯಾವ ರೀತಿಯ ನಿಬಂಧನೆಗಳನ್ನು ಹಾಕಲಾಗಿದೆ ;

(ಇ) ರಾಜ್ಯದ ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಿಗೆ ಸರ್ಕಾರದಿಂದ ಇತರೆ ಚಲನಚಿತ್ರ ಮಂದಿರಗಳಿಗೆ ನೀಡಿರುವಂತೆಯೇ ಆದಾಯ ತೆರಿಗೆ ಸೇರಿದಂತೆ ಇತರೆ ರಿಯಾಯಿತಿ ಹಾಗೂ ಅನುಕೂಲತೆಗಳನ್ನು ನೀಡಲಾಗುತ್ತಿದೆಯೇ;

(ಈ) ರಾಜ್ಯದ ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಿಗೆ ಕನ್ನಡ ಚಲನಚಿತ್ರಗಳನ್ನು ಪ್ರದರ್ಶಿಸುವ ವಿಚಾರದಲ್ಲಿ ಇತರೆ ಚಿತ್ರಮಂದಿರಗಳಿಗೆ ಹಾಕಿರುವಂತೆಯೇ ನಿಬಂಧನೆಗಳನ್ನು ಹಾಕಲಾಗಿದೆಯೇ ;

(ಉ) ಇಲ್ಲವಾದಲ್ಲಿ, ಕಾರಣಗಳೇನು ; ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಿಗೂ ಕನ್ನಡ ಚಲನಚಿತ್ರಗಳನ್ನು ಪ್ರದರ್ಶಿಸುವ ವಿಚಾರದಲ್ಲಿ ಕಡ್ಡಾಯ ನಿಬಂಧನೆ ಹಾಕಲು ಸರ್ಕಾರ ಮುಂದಾಗುವುದೇ ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಡಿಯಲ್ಲಿ ಬರುವ ಆಸ್ಪತ್ರೆಗಳಲ್ಲಿ ವೈದ್ಯರ ಮತ್ತು ಅರೆ ವೈದ್ಯಕೀಯ ಸಿಬ್ಬಂದಿ ಕೊರತೆ ಬಗ್ಗೆ. ಡಯಾಲಿಸಿಸ್ ಸೌಲಭ್ಯ ಇಲ್ಲದಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೯೩೭ (೧೨೧೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಡಿಯಲ್ಲಿ ಎಷ್ಟು ಆಸ್ಪತ್ರೆಗಳು ಬರುತ್ತವೆ ;

(ಆ) ಸದರಿ ಆಸ್ಪತ್ರೆಗಳಲ್ಲಿ ಯಾವ ಯಾವ ಆಸ್ಪತ್ರೆಗಳಲ್ಲಿ ವೈದ್ಯರ ಹಾಗೂ ಇತರೆ ಸಿಬ್ಬಂದಿಗಳ ಕೊರತೆ ಇದೆ ;

(ಇ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಸ್ಪತ್ರೆಗಳಲ್ಲಿಯೂ ಸಿಬ್ಬಂದಿ ಹಾಗೂ ವೈದ್ಯರ ಕೊರತೆ ಉಂಟಾಗಲು ಕಾರಣವೇನು ;

(ಈ) ವೈದ್ಯರು ಹಾಗೂ ಸಿಬ್ಬಂದಿಗಳ ನೇಮಕಾತಿ ಮಾಡಿಕೊಳ್ಳಲು ಯಾವ ರೀತಿಯ ಜರೂರು ಕ್ರಮ ಕೈಗೊಳ್ಳಲಾಗುವುದು ;

(ಉ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಡಿಯಲ್ಲಿ ಬರುವ ಎಷ್ಟು ಆಸ್ಪತ್ರೆಗಳಲ್ಲಿ ಡಯಾಲಿಸಿಸ್ ಸೌಲಭ್ಯವಿರುತ್ತದೆ ;

(ಊ) ಡಯಾಲಿಸಿಸ್ ಸೌಲಭ್ಯವನ್ನು ನೀಡಲು ವ್ಯವಸ್ಥೆ ಕಲ್ಪಿಸುವ ಬಗ್ಗೆ ಯಾವ ರೀತಿಯ ಕ್ರಮ ಕೈಗೊಳ್ಳಲಾಗುವುದು ?

## ಬೆಂಗಳೂರು ನಗರದಲ್ಲಿ ಕೆರೆಗಳ ಸರ್ವೆ ಮುಗಿದ ನಂತರದಲ್ಲಿ ಕೆರೆ ಒತ್ತುವರಿಯಾಗುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ ) –**

೯೩೮ (೧೨೧೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಇರುವ ಕೆರೆಗಳ ಸಂಖ್ಯೆ ಎಷ್ಟು ; ಸದರಿ ಕೆರೆಗಳಲ್ಲಿ ಕಳೆದ ಮೂರು ವರ್ಷಗಳಿಂದ ಕೆರೆಗಳ ಸರ್ವೆ ಕಾರ್ಯ ಮುಗಿದ ಕೆರೆಗಳು ಯಾವುವು ;

(ಆ) ಸರ್ವೆ ಕಾರ್ಯ ಮುಗಿದ ನಂತರ ಯಾವ ಯಾವ ಕೆರೆಗಳಿಗೆ ಇದುವರೆವಿಗೂ ಬೇಲಿ ಹಾಕಲಾಗಿಲ್ಲ ; ಇದಕ್ಕೆ ಕಾರಣಗಳೇನು ;

(ಇ) ಸರ್ವೆ ಕಾರ್ಯ ಮುಗಿದ ನಂತರವೂ ಕೆಲವು ಕೆರೆಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ರೀತಿಯ ಒತ್ತುವರಿ ಕಂಡು ಬಂದಿದ್ದಲ್ಲಿ, ಯಾವ ರೀತಿಯ ಕಠಿಣ ಕ್ರಮ ಕೈಗೊಳ್ಳಲಾಗಿದೆ ;

(ಉ) ಇದುವರೆವಿಗೂ ಕ್ರಮ ಕೈಗೊಳ್ಳದಿದ್ದಲ್ಲಿ, ಕಾರಣವೇನು ; ಒತ್ತುವರಿಯಾದ ಸ್ಥಳವನ್ನು ವಶಪಡಿಸಿಕೊಳ್ಳಲು ಬೇಕಾಗುವ ಕಾಲಾವಧಿ ಎಷ್ಟು ?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಪೌರ ಕಾರ್ಮಿಕರ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೩೯ (೯೭೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿರುವ ಒಟ್ಟು ಪೌರ ಕಾರ್ಮಿಕರ ಸಂಖ್ಯೆ ಎಷ್ಟು ; (ಮಹಿಳೆಯರು ಮತ್ತು ಪುರುಷರು ಸೇರಿದಂತೆ)

(ಆ) ಪೌರ ಕಾರ್ಮಿಕರ ಮಾಸಿಕ ವೇತನದಲ್ಲಿ ಪ್ರತಿ ತಿಂಗಳು ಕಾರ್ಮಿಕರ ಭವಿಷ್ಯ ನಿಧಿ (ಪಿಎಫ್) ಹಾಗೂ ರಾಜ್ಯ ಕಾರ್ಮಿಕರ ವಿಮೆ (ಇಎಸ್ಐ) ಸೌಲಭ್ಯಕ್ಕಾಗಿ ಒಟ್ಟು ಎಷ್ಟು ಹಣ ಕಡಿತಗೊಳಿಸಲಾಗುತ್ತದೆ ;

(ಇ) ಕಳೆದ ೧೦ ವರ್ಷದಲ್ಲಿ ಪೌರ ಕಾರ್ಮಿಕರ ವೇತನದಲ್ಲಿ ಕಡಿತಗೊಳಿಸಿದ ಇಎಸ್‌ಐ ಸೇವೆಯ ಕಂತಿನ ಮೊತ್ತ, ಸಂಬಂಧಪಟ್ಟ ಇಲಾಖೆಗೆ ಜಮೆಯಾದ ವಿವರ ಮತ್ತು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ತನ್ನ ಪಾಲಿನ ಮೊತ್ತವನ್ನು ಜಮೆ ಮಾಡಿದ ವಿವರ ನೀಡುವುದು ;

(ಈ) ಈ ಪ್ರಕ್ರಿಯೆಯಲ್ಲಿ ಅಕ್ರಮ ನಡೆದಿದ್ದು, ಕಾರ್ಮಿಕರ ವೇತನದಲ್ಲಿ ಕಡಿತಗೊಳಿಸಿದ ಹಾಗೂ ಜಮೆಗೊಳಿಸಲು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ನೀಡಿದ ಹಣ ದುರ್ಬಳಕೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಬಂದಿದ್ದರೆ, ಸರ್ಕಾರ ತೆಗೆದುಕೊಂಡ ಕ್ರಮವೇನು ?

## ಶಾಲಾ ಮಕ್ಕಳ ಸುರಕ್ಷತೆ ಮತ್ತು ಭದ್ರತೆ ಕುರಿತು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೪೦ (೯೭೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಮಕ್ಕಳ ಸುರಕ್ಷತೆ ಮತ್ತು ಭದ್ರತೆ ಖಾತ್ರಿಗೊಳಿಸಲು ಕರ್ನಾಟಕ ಪೊಲೀಸ್ ಕಾಯಿದೆ, ೨೦೧೧ಕ್ಕೆ ತಿದ್ದುಪಡಿ ತರಲಾದ ಕಾನೂನನ್ನು ಅನುಷ್ಠಾನಗೊಳಿಸಲಾಗಿದೆಯೇ ;

(ಆ) ಶಾಲೆಗಳಲ್ಲಿ ಮಕ್ಕಳ ಮೇಲೆ ನಡೆಯುವ ದೌರ್ಜನ್ಯ ಮತ್ತು ಲೈಂಗಿಕ ಕಿರುಕುಳ ತಡೆ ಹಾಗೂ ಸುರಕ್ಷತೆ ದೃಷ್ಠಿಯಿಂದ ಕಾಯಿದೆ ರೂಪಿಸಿದ್ದು, ಅದರ ಅನುಗುಣವಾಗಿ ಪೊಲೀಸರು ಇಲ್ಲಿಯವರೆಗೆ ತೆಗೆದುಕೊಂಡ ಕ್ರಮವೇನು ;

(ಇ) ಕೆಲವು ಖಾಸಗಿ ಸಂಸ್ಥೆಗಳು ವಿರೋಧ ವ್ಯಕ್ತಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಮತ್ತೊಂದೆಡೆ ಮಕ್ಕಳ ಸುರಕ್ಷತೆಗೆ ಶಾಲೆಗೊಂದು ಹೋಂ ಗಾರ್ಡ್ ಕೊಡಲು ಪೊಲೀಸ್ ಇಲಾಖೆ ನಿರ್ಧರಿಸಿದೆಯೇ ;

(ಉ) ಪೊಲೀಸರು ಶಾಲೆಯ ಲೋಪ ದೋಷಗಳನ್ನು ತೋರಿಸಿ, ಲಂಚಕ್ಕೆ ಒತ್ತಾಯಿಸುವ ಸಾಧ್ಯತೆ ಇದೆಯೇ ;

(ಊ) ದೂರು ಬಾರದೆಯೇ ಪೊಲೀಸರು ವಿನಾಕಾರಣ ಶಾಲೆಯ ಬಳಿ ಬಂದು ತಪಾಸಣೆ ನೆಪದಲ್ಲಿ ಶಾಲೆಗಳಿಗೆ ಭೇಟಿ ನೀಡುವುದರಿಂದ, ಮಕ್ಕಳಿಗೆ ಹಾಗೂ ಪೋಷಕರ ಮೇಲೆ ಪರಿಣಾಮ ಬೀರುವುದು ಸರಿಯೇ ?

## ಕನ್ನಡ ಹೋರಾಟಗಾರರ ಮೇಲಿನ ಪ್ರಕರಣಗಳು

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೪೧ (೯೭೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೆಲ–ಜಲ ಭಾಷೆಗಾಗಿ ಕನ್ನಡ ಹೋರಾಟಗಾರರ ಮೇಲೆ ದಾಖಲಾಗಿರುವ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ; (ದಾಖಲಾಗಿರುವ ಪ್ರಕರಣಗಳ ಜಿಲ್ಲಾವಾರು ವಿವರ ನೀಡುವುದು)

(ಆ) ಈ ಪೈಕಿ ಇಲ್ಲಿಯವರೆಗೆ ಇತ್ಯರ್ಥವಾದ ಹಾಗೂ ಬಾಕಿ ಉಳಿದ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ಕಳೆದ ೩ ವರ್ಷದಲ್ಲಿ ಕನ್ನಡ ಹೋರಾಟಗಾರರ ಮೇಲಿನ ಎಷ್ಟು ಪ್ರಕರಣಗಳನ್ನು ಹಿಂತೆಗೆದುಕೊಳ್ಳಲಾಗಿದೆ ; (ವಿವರ ನೀಡುವುದು)

(ಈ) ಜಲ, ಗಡಿ ವಿಚಾರದಲ್ಲಿ ರಾಜ್ಯಕ್ಕೆ ಜಯ ಸಿಕ್ಕಿದರೆ ಅದಕ್ಕೆ ಹೋರಾಟಗಾರರ ಶ್ರಮ ಕಾರಣವಲ್ಲವೇ ; ಸರ್ಕಾರ ಅವರ ವಿರುದ್ಧ ಪೊಲೀಸ್ ಕೇಸ್ ದಾಖಲಿಸಿರುವುದರಿಂದ ಹೋರಾಟಗಾರರು ವರ್ಷಾನುಗಟ್ಟಲೆ ನ್ಯಾಯಾಲಯಗಳಿಗೆ ಅಲೆದಾಡುವಂತೆ ಮಾಡುವುದು ಸರಿಯೇ ;

(ಉ) ಎರಡು ಸಾವಿರ ಕನ್ನಡ ಹೋರಾಟಗಾರರು (ಕಾರ್ಯಕರ್ತರು) ಇಂದಿಗೂ ಪೊಲೀಸ್ ಠಾಣೆಗೆ ವಾರಕ್ಕೊಮ್ಮೆ ಕಡ್ಡಾಯವಾಗಿ ಹೋಗಿ ಸಹಿ ಹಾಕಿ ಬರಬೇಕಾಗಿರುವುದು ಹಾಗೂ ಕೆಲವರ ಮೇಲೆ ಗೂಂಡಾ ಕಾಯ್ದೆ ಹೂಡಿ ಗಡಿಪಾರು ಸಹ ಮಾಡಲಾಗಿದ್ದು, ಈ ಕಾರಣಕ್ಕಾಗಿ ಅವರಿಗೆ ಸರ್ಕಾರಿ ಉದ್ಯೋಗ ಸಿಗದಂತೆ ಮಾಡಿರುವುದು ಸರಿಯೇ ;

(ಊ) ಕನ್ನಡ ಸಂಘಟನೆಯ ನಾಯಕರ ಮೇಲೆ ರಾಜ್ಯದ ವಿವಿಧ ಜಿಲ್ಲೆಗಳ ನ್ಯಾಯಾಲಯಗಳಲ್ಲಿ ಪ್ರಕರಣ ದಾಖಲಿಸಿ, ಆತ ಊರೂರು ಅಲೆಯುವಂತೆ ಮಾಡುವ ಮೂಲಕ ಆತನ ಜಂಘಾಬಲವನ್ನು ಹುದುಗಿಸುವ ತಂತ್ರವನ್ನು ಸರ್ಕಾರ ಮಾಡುವುದು ಸರಿಯೇ ;

(ಋ) ಇತ್ತೀಚೆಗೆ ತಮಿಳುನಾಡಿಗೆ ಕಾವೇರಿ ನೀರು ಬಿಡುಗಡೆ ವಿರೋಧಿಸಿ ನಡೆದ ಹೋರಾಟದಲ್ಲಿ ದಾಖಲಾದ ಮೊಕದ್ದಮೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಎ) ಈ ಹೋರಾಟದಲ್ಲಿ ರೈತರ ಮೇಲೆ ದಾಖಲಾದ ಮೊಕದ್ದಮೆಗಳನ್ನು ಸರ್ಕಾರ ಹಿಂತೆಗೆದುಕೊಳ್ಳಲು ತೆಗೆದುಕೊಂಡ ಕ್ರಮವೇನು ?

## ಬೆಳಗಾವಿ ಸುವರ್ಣ ಸೌಧದಲ್ಲಿ ಅಭಿವೃದ್ಧಿ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೪೨ (೯೭೪) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿಯ ಸುವರ್ಣ ಸೌಧದಲ್ಲಿ ಯಾವ ವರ್ಷದಲ್ಲಿ ಅಧಿವೇಶನವನ್ನು ಪ್ರಾರಂಭಿಸಲಾಯಿತು ;

(ಆ) ಸುವರ್ಣಸೌಧ ಸ್ಥಾಪನೆಯಾದ ನಂತರ ಇಲ್ಲಿಯವರೆಗೂ ಯಾವ ಯಾವ ವರ್ಷದಲ್ಲಿ ಯಾವ ಯಾವ ದಿನಾಂಕಗಳವರೆಗೂ ಅಧಿವೇಶನವು ನಡೆದಿದೆ; ಇಲ್ಲಿಯವರೆಗೂ ಒಟ್ಟು ಎಷ್ಟು ದಿನಗಳ ಕಾಲ ಅಧಿವೇಶನವು ನಡೆದಿದೆ ;

(ಇ) ಸುವರ್ಣಸೌಧದಲ್ಲಿ ಅಧಿವೇಶನ ಪ್ರಾರಂಭವಾದ ದಿನದಿಂದ ಇಲ್ಲಿಯವರೆಗೂ ಪ್ರತಿ ಸಾರಿಯ ಅಧಿವೇಶನದಲ್ಲಿಯೂ ಅವಶ್ಯಕವಿರುವ ಗಣಕಯಂತ್ರಗಳನ್ನು ಸಿಬ್ಬಂದಿಗಳಿಗೆ ಹೇಗೆ ಮತ್ತು ಯಾವ ಆಧಾರದಲ್ಲಿ ಒದಗಿಸಲಾಗುತ್ತಿದೆ ;

(ಈ) ಪ್ರತಿ ಅಧಿವೇಶನದಲ್ಲಿ ಗಣಕಯಂತ್ರಗಳಿಗೆ ಖರ್ಚು ಮಾಡಿರುವ ಹಣ ಎಷ್ಟು ; ಗಣಕಯಂತ್ರಗಳನ್ನು ಬಾಡಿಗೆ ಆಧಾರದಲ್ಲಿ ಒದಗಿಸುತ್ತಿದ್ದ ಪಕ್ಷದಲ್ಲಿ ಇಲ್ಲಿಯವರೆಗೂ ನಡೆದಿರುವ ಒಟ್ಟು ಅಧಿವೇಶನಗಳಲ್ಲಿ ಒಂದೊಂದು ಅಧಿವೇಶನದಲ್ಲಿ ಒಂದೊಂದು ಗಣಕಯಂತ್ರಕ್ಕೆ ನೀಡಿರುವ ಬಾಡಿಗೆ ದರ ಎಷ್ಟು ; (ವಿವರ ನೀಡುವುದು)

(ಉ) ಗಣಕಯಂತ್ರದ ಬಾಡಿಗೆಯನ್ನು ಹೊರತುಪಡಿಸಿ, ಗಣಕಯಂತ್ರದಲ್ಲಿ ಅಳವಡಿಸಿದ್ದ ವಿವಿಧ ಸಾಫ್ಟ್‌ವೇರ್‌ಗಳಿಗೆ ಪ್ರತ್ಯೇಕ ಹಣ ನೀಡಲಾಗಿದೆಯೇ ; ಅಥವಾ ಇದೆಲ್ಲವೂ ಗಣಕಯಂತ್ರದ ಬಾಡಿಗೆ ದರದಲ್ಲಿ ಒಳಗೊಳ್ಳುತ್ತದೆಯೇ ;

(ಊ) ಅಧಿವೇಶನ ನಡೆಯುತ್ತಿರುವ ಸಂದರ್ಭದಲ್ಲಿ ಭಾನುವಾರದ ರಜಾ ದಿನಗಳಲ್ಲಿ ಗಣಕಯಂತ್ರಗಳಿಗೆ ಬಾಡಿಗೆಯನ್ನು ಪಾವತಿ ಮಾಡಲಾಗುತ್ತಿತ್ತೆ ?

## ಪೊಲೀಸ್ ಸಿಬ್ಬಂದಿಗಳ ವೇತನ ಪರಿಷ್ಕರಣೆ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭಾ ಕ್ಷೇತ್ರ ) –**

೯೪೩ (೯೭೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ರಾಜ್ಯದಲ್ಲಿ ಪೊಲೀಸ್ ಸಿಬ್ಬಂದಿಗಳ ವೇತನ ಪರಿಷ್ಕರಣೆ ಮತ್ತು ಇನ್ನಿತರ ಬೇಡಿಕೆಗಾಗಿ ಸರ್ಕಾರ ಸಮಿತಿ ರಚಿಸಿದೆಯೇ ; ಸಮಿತಿಯಲ್ಲಿನ ಸದಸ್ಯರ ವಿವರ ನೀಡುವುದು ;

(ಆ) ಸಮಿತಿಯು ಸರ್ಕಾರಕ್ಕೆ ವರದಿ/ಶಿಫಾರಸ್ಸು ಸಲ್ಲಿಸಿದೆಯೇ ; ಹೌದಾದಲ್ಲಿ, ಶಿಫಾರಸ್ಸಿನ ಮುಖ್ಯಾಂಶಗಳೇನು ;

(ಇ) ಸಮಿತಿಯ ಯಾವ – ಯಾವ ಶಿಫಾರಸ್ಸುಗಳನ್ನು ಸರ್ಕಾರ ಈಡೇರಿಸಿದೆ ; ಯಾವ ಶಿಫಾರಸ್ಸುಗಳನ್ನು ಸರ್ಕಾರ ಮುಂದಿನ ದಿನಗಳಲ್ಲಿ ಕಾರ್ಯರೂಪಕ್ಕೆ ತರುತ್ತಿದೆ ; (ವಿವರ ನೀಡುವುದು)

(ಈ) ಪೊಲೀಸರ ವೇತನ ಹೆಚ್ಚಳ ಸೇರಿದಂತೆ ಅವರ ಇನ್ನಿತರ ಬೇಡಿಕೆಗಳನ್ನು ಈಡೇರಿಸಿ, ಇಲಾಖೆಯನ್ನು ಹಾಗೂ ಸಿಬ್ಬಂದಿಗಳ ಹಿತ ಕಾಪಾಡಲು ಸರ್ಕಾರ ಯಾವ ಕಾಲಮಿತಿಯಲ್ಲಿ ಯಾವ ಕ್ರಮ ಕೈಗೊಳ್ಳಲಿದೆ ? (ವಿವರ ನೀಡುವುದು)

## ರಾಜ್ಯದ ಯಾವ ಯಾವ ಇಲಾಖೆಗಳನ್ನು ಕಾಗದ ರಹಿತ ಕಛೇರಿಯನ್ನಾಗಿ ಮಾಡುವ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭಾ ಕ್ಷೇತ್ರ ) –**

೧೪೪ (೧೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಯಾವ ಇಲಾಖೆ, ಕಛೇರಿಯನ್ನು ಕಾಗದ ರಹಿತ ಕಛೇರಿಯನ್ನಾಗಿ ಮಾಡಲಾಗಿದೆ ; ಮುಂದೆ ಯಾವ ಇಲಾಖೆ, ಕಛೇರಿಗಳನ್ನು ಕಾಗದ ರಹಿತ ಮಾಡಲಾಗುವುದು ;

(ಆ) ಕಂದಾಯ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ಕಛೇರಿಗಳನ್ನು ಕಾಗದ ರಹಿತ ಮಾಡಿದಲ್ಲಿ ಆಡಳಿತಕ್ಕೆ ವೇಗ ನೀಡುವುದು ಹಾಗೂ ಭ್ರಷ್ಟಾಚಾರ ನಿಯಂತ್ರಣ ಮತ್ತು ಪಾರದರ್ಶಕ ಆಡಳಿತಕ್ಕೆ ನಾಂದಿಯಾಗುವುದು ಸರ್ಕಾರದ ಗಮನಕ್ಕಿಲ್ಲವೇ ;

(ಇ) ಕಾಗದ ರಹಿತ ಕಛೇರಿ, ಇ–ಆಡಳಿತ ಸೇವೆಗಳನ್ನು ವಿಸ್ತರಿಸಲು ಸರ್ಕಾರ ಯಾವ ಹಂತದಲ್ಲಿ ಯಾವ ಕ್ರಮಕೈಗೊಳ್ಳಲಿದೆ? (ಸಂಪೂರ್ಣ ವಿವರ ನೀಡುವುದು)

## ಹಾವೇರಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭಾ ಕ್ಷೇತ್ರ ) –**

೧೪೫ (೧೮೧) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್‌ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ;

(ಆ) ಬಿಡುಗಡೆಯಾದ ಅನುದಾನದಲ್ಲಿ ಇದುವರೆಗೂ ಪೂರ್ಣಗೊಂಡ ಕಾಮಗಾರಿಗಳಾವುವು ; ಪೂರ್ಣಗೊಳ್ಳದೆ ಇರುವ ಕಾಮಗಾರಿಗಳಾವುವು ; (ಕಾಮಗಾರಿವಾರು ಮಾಹಿತಿ ಒದಗಿಸುವುದು)

(ಇ) ಈ ಎಲ್ಲಾ ಕಾಮಗಾರಿಗಳ ನಿರ್ವಹಣೆಯನ್ನು ಯಾವ ಸಂಸ್ಥೆಗೆ ನೀಡಲಾಗಿದೆ ; ಪೂರ್ಣಗೊಂಡ ಕಾಮಗಾರಿಗಳನ್ನು ಪರಿಶೀಲಿಸಿ ಹಣ ಬಿಡುಗಡೆ ಮಾಡಿದೆಯೇ ; (ಕಾಮಗಾರಿವಾರು, ಅನುದಾನವಾರು ಮಾಹಿತಿ ಒದಗಿಸುವುದು)

(ಈ) ಬಾಕಿ ಉಳಿದಿರುವ ಅನುದಾನ ಎಷ್ಟು ?

## ಹಜ್‌ ಯಾತ್ರಿಗಳಿಗೆ ಸರ್ಕಾರ ನೀಡುತ್ತಿರುವ ಸಹಾಯಧನದ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭಾ ಕ್ಷೇತ್ರ ) –**

೧೪೬ (೧೮೦) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್‌ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸಕ್ತ ಹಜ್‌ ಯಾತ್ರಿಗಳಿಗೆ ಸರ್ಕಾರ ನೀಡುತ್ತಿರುವ ಸಹಾಯಧನ – ಸೌಲಭ್ಯಗಳೇನು ; (ವಿವರ ನೀಡುವುದು)

(ಆ) ಕಳೆದ ೫ ವರ್ಷಗಳಲ್ಲಿ ಹಜ್ ಯಾತ್ರೆಗಾಗಿ ಸರ್ಕಾರ ಕಾಯ್ದಿರಿಸಿದ ಹಾಗೂ ಖರ್ಚು ಮಾಡಿದ ಅನುದಾನ ಎಷ್ಟು ; (ವರ್ಷವಾರು ವಿವರ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ಹಜ್ ಯಾತ್ರಿಕರಿಗೆ ಸರ್ಕಾರ ನೀಡಿದ ಸಹಾಯಧನ, ಸೌಲಭ್ಯ ಪಡೆದ ಯಾತ್ರಿಕರ ಸಂಖ್ಯೆ ಎಷ್ಟು ? (ವರ್ಷವಾರು ವಿವರ ನೀಡುವುದು)

## ಹಾವೇರಿ ನಗರದಲ್ಲಿ ಅಭಿವೃದ್ಧಿ ಇಲಾಖೆಯಿಂದ ಎಸ್.ಸಿ.ಪಿ./ಟಿ.ಎಸ್.ಪಿ. ಯೋಜನೆಯ ಬಗ್ಗೆ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭಾ ಕ್ಷೇತ್ರ) –**

೯೪೭ (೧೧೭೩) ಮಾನ್ಯ ನಗರಾಭಿವೃದ್ಧಿ ಹಾಗೂ ಹಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ನಗರದಲ್ಲಿ ಕಳೆದ ಮೂರು ವರ್ಷದಲ್ಲಿ ನಗರಾಭಿವೃದ್ಧಿ ಇಲಾಖೆಯ ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಯಡಿಯಲ್ಲಿ ವಿವಿಧ ಕಾರ್ಯಕ್ರಮಗಳಿಗೆ ನಿಗಧಿಪಡಿಸಿದ ಅನುದಾನವೆಷ್ಟು ;

(ಆ) ಈ ಸಾಲಿನಲ್ಲಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಈ ಸಾಲಿನಲ್ಲಿ ಉಳಿದಿರುವ ಅನುದಾನದಿಂದ ಮುಂದಿನ ಸಾಲಿನಲ್ಲಿ ಹಾವೇರಿ ನಗರವನ್ನು ಅಭಿವೃದ್ಧಿಪಡಿಸಲಾಗುವುದೆ ;

(ಈ) ಬಾಕಿ ಉಳಿಸಲು ಕಾರಣಗಳೇನು ; ಇದಕ್ಕೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ಜರುಗಿಸಲಾಗಿದೆಯೇ ?

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಫ್ಲೆಕ್ಸ್, ಹೋರ್ಡಿಂಗ್ಸ್‌ಗಳ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೪೮ (೧೦೦೬) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಸರ್ಕಾರ ಪಾಲಿಕೆಯಿಂದ ಅನುಮತಿ ಪಡೆದಿರುವ ಫ್ಲೆಕ್ಸ್ ಹಾಗೂ ಹೋರ್ಡಿಂಗ್ಸ್ ಡಿಸ್‌ಪ್ಲೇ ಸ್ಥಳಗಳು ಯಾವುವು ; (ವಿಧಾನಸಭಾ ಕ್ಷೇತ್ರವಾರು ವಿವರ ನೀಡುವುದು)

(ಆ) ಫ್ಲೆಕ್ಸ್ ಹಾಗೂ ಹೋರ್ಡಿಂಗ್ಸ್ ಡಿಸ್‌ಪ್ಲೆಗಳಿಗೆ ನಿಗಧಿಪಡಿಸಿರುವ ಬಾಡಿಗೆ ಪ್ರಮಾಣವೆಷ್ಟು ; ಹಾಗೂ ವರಮಾನವೆಷ್ಟು ; ಕಳೆದ ೨ ವರ್ಷಗಳಿಂದ ಪಾಲಿಕೆಗೆ ಪ್ರತಿ ಮಾಹೆಯಾನ ಸಂದಾಯವಾಗುತ್ತಿರುವ ವರಮಾನವೆಷ್ಟು ; ಕಳೆದ ೨ ವರ್ಷದಿಂದ ಎಷ್ಟು ವರಮಾನ ಸಂದಾಯವಾಗಿದೆ ;

(ಇ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಫ್ಲೆಕ್ಸ್‌ಗಳನ್ನು ಹಾಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕ್ರಮ ಕೈಗೊಳ್ಳಲಾಗಿದೆಯೇ ; ದಂಡ ವಿಧಿಸಲಾಗಿದೆಯೇ, ವಿಧಿಸಿದ್ದಲ್ಲಿ, ದಂಡ ವಸೂಲಾತಿಯ ಮಾಹಿತಿ ನೀಡುವುದು ;

(ಈ) ಅನಧಿಕೃತವಾಗಿ ಅಳವಡಿಸಿರುವ ಫ್ಲೆಕ್ಸ್, ಬಂಟಿಂಗ್ ಹಾಗೂ ಯಾವುದೇ ಜಾಹೀರಾತುಗಳನ್ನು ತೆರವುಗೊಳಿಸುವಲ್ಲಿ, ಅಧಿಕಾರಿಗಳ ಜವಾಬ್ದಾರಿ ಸಮರ್ಪಕವಾಗಿದೆಯೇ ; ಅಥವಾ ಬೇಜವಾಬ್ದಾರಿ ಕಂಡು ಬಂದಿದೆಯೇ ; ಈ ಸಂಬಂಧ ಎಷ್ಟು ಜನರ ಮೇಲೆ ಶಿಸ್ತು ಕ್ರಮ ಕೈಗೊಳ್ಳಲಾಗಿದೆ ?

## ಬೆಂಗಳೂರು ನಗರದಲ್ಲಿ ನಡೆದ ಕಾವೇರಿ ನೀರು ಹೋರಾಟ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) –**

೯೪೯ (೧೦೦೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಕಾವೇರಿ ನದಿ ನೀರು ಹಂಚಿಕೆ ವಿಚಾರದಲ್ಲಿ ನಡೆದ ಪ್ರತಿಭಟನೆ ಸಂದರ್ಭದಲ್ಲಿ ಬೆಂಗಳೂರು ಮಹಾನಗರದಲ್ಲಿ ಬಂಧಿತರಾದ ಹೋರಾಟಗಾರರ ಸಂಖ್ಯೆ ಎಷ್ಟು ; ಹಾಗೂ ಐ.ಪಿ.ಸಿ. ಸೆಕ್ಷನ್ ೩೦೭ರ ಅಡಿಯಲ್ಲಿ ಬಂಧಿಸಿ ಜೈಲು ಸೇರಿದ್ದವರ ಸಂಖ್ಯೆ ಎಷ್ಟು ; (ಪೊಲೀಸ್ ಠಾಣೆವಾರು ವಿವರ ನೀಡುವುದು)

(ಆ) ಈ ಹೋರಾಟದಲ್ಲಿ ಪಾಲ್ಗೊಂಡ ಪ್ರತಿಭಟನೆಕಾರರನ್ನು ಐ.ಪಿ.ಸಿ. ಸೆಕ್ಷನ್ ೩೦೭ರ ಅಡಿ ಬಂಧಿಸಲು ಕಾರಣವೇನು ;

(ಇ) ಕಾವೇರಿ ಪ್ರತಿಭಟನೆಯಲ್ಲಿ ಪೊಲೀಸ್ ಫೈರಿಂಗ್‌ನಿಂದಾಗಿ ಮೃತ ಪಟ್ಟವರ ಸಂಖ್ಯೆ ಎಷ್ಟು ; ಮೃತಪಟ್ಟವರ ಸಂಪೂರ್ಣ ವಿವರದ ಜೊತೆಗೆ ಸರ್ಕಾರ ಇವರ ಕುಟುಂಬಗಳಿಗೆ ನೀಡಿದ ಪರಿಹಾರವೇನು ;

(ಈ) ಈ ವೇಳೆಯಲ್ಲಿ ಗಾಯಗೊಂಡವರ ಸಂಖ್ಯೆ ಎಷ್ಟು ; ಅವರು ಯಾರು ಯಾರು ; ಅವರಿಗೆ ಸರ್ಕಾರ ನೀಡಿದ ಪರಿಹಾರವೇನು ?

## ಕ್ಲಾಸ್ I ಹಾಗೂ ಕ್ಲಾಸ್ II ಹುದ್ದೆ ಹಾಗೂ ಬೇರೆ ಬೇರೆ ಇಲಾಖೆಗಳಲ್ಲಿ ನಡೆಸುತ್ತಿರುವ ನೇಮಕಾತಿ ಪ್ರಕ್ರಿಯೆ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ ) –**

೯೫೦ (೧೨೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸದ್ಯ ಕರ್ನಾಟಕ ಲೋಕಸೇವಾ ಆಯೋಗದ ಮೂಲಕ ಎಷ್ಟು ಕ್ಲಾಸ್ I ಹಾಗೂ ಕ್ಲಾಸ್ II ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಚಾಲನೆಯಲ್ಲಿದೆ ; ಮತ್ತು ಅದು ಯಾವ ಹಂತದಲ್ಲಿದೆ ; (ವಿವರ ನೀಡುವುದು)

(ಆ) ಅದೇ ರೀತಿ ಸದ್ಯ ರಾಜ್ಯ ಸರ್ಕಾರದಲ್ಲಿರುವ ಸುಮಾರು ೨೮ ಇಲಾಖೆಗಳಲ್ಲಿ ಯಾವ ಯಾವ ಹುದ್ದೆಗಳನ್ನು ಎಷ್ಟು ಸಂಖ್ಯೆಯಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ; ಪ್ರಸ್ತುತ ಹಂತದ ವಿವರ ನೀಡುವುದು?

## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾರ್ಮಿಕರ ವೇತನ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೯೩೧ (೧೦೧೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸುಮಾರು ೧೨ ಸಾವಿರ ಗುತ್ತಿಗೆ ಪೌರ ಕಾರ್ಮಿಕರ ವೇತನದಿಂದ ಕಡಿತವಾದ ಭವಿಷ್ಯ ನಿಧಿ ಮತ್ತು ರಾಜ್ಯ ಕಾರ್ಮಿಕರ ವಿಮೆ ಕಂತಿನ ಮೊತ್ತ ಕಳೆದ ೧೧ ವರ್ಷಗಳಿಂದ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಪಾವತಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ರೀತಿ ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಪಾವತಿಯಾಗದಿರುವ ಭವಿಷ್ಯ ನಿಧಿ ಮತ್ತು ರಾಜ್ಯ ಕಾರ್ಮಿಕರ ವಿಮೆ ಕಂತಿನ ಮೊತ್ತವೆಷ್ಟು ; (ಪ್ರತಿಯೊಂದು ವರ್ಷದ ವಿವರವನ್ನು ಪ್ರತ್ಯೇಕವಾಗಿ ನೀಡುವುದು)

(ಇ) ಇದಕ್ಕೆ ಕಾರಣಕರ್ತರಾದ ಗುತ್ತಿಗೆದಾರರು ಮತ್ತು ಈ ಬಗ್ಗೆ ಉಸ್ತುವಾರಿ ವಹಿಸಬೇಕಾಗಿದ್ದ ಅಧಿಕಾರಿಗಳು ಯಾರ್‍ಯಾರು ; (ಪ್ರತಿಯೊಬ್ಬರ ವಿವರವನ್ನು ನೀಡುವುದು)

(ಈ) ಸಂಬಂಧಪಟ್ಟ ಗುತ್ತಿಗೆದಾರರು ಮತ್ತು ಅಧಿಕಾರಿಗಳ ವಿರುದ್ಧ ಸರ್ಕಾರ ಕ್ರಮ ಕೈಗೊಂಡಿದೆಯೇ; ಇಲ್ಲದಿದ್ದಲ್ಲಿ, ಅದಕ್ಕೆ ಕಾರಣಗಳೇನು;

(ಉ) ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಭವಿಷ್ಯ ನಿಧಿ ಮತ್ತು ರಾಜ್ಯ ಕಾರ್ಮಿಕರ ವಿಮೆ ಕಂತಿನ ಮೊತ್ತವನ್ನು ಪಾವತಿಸದಿರುವುದರಿಂದ ಪೌರ ಕಾರ್ಮಿಕರು ಸೂಕ್ತ ವೈದ್ಯಕೀಯ ಚಿಕಿತ್ಸೆ ಮತ್ತು ಇನ್ನಿತರ ಸೌಲಭ್ಯಗಳಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ನ್ಯಾಯಾಲಯಗಳಲ್ಲಿ ಭದ್ರತೆಯ ಕೊರತೆ

**ಶ್ರೀಮತಿ ತಾರಾಅನೂರಾಧ (ನಾಮನಿರ್ದೇಶನ ಹೊಂದಿದವರು) –**

೯೫೨ (೧೧೫೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಕೆಳಹಂತದ ನ್ಯಾಯಾಲಯಗಳಲ್ಲಿ ಭದ್ರತೆಯ ಕೊರತೆ ಇರುವುದು ನಿಜವೇ ;

(ಆ) ನಿಜವಿದ್ದಲ್ಲಿ, ಕೆಳಹಂತದ ನ್ಯಾಯಾಲಯಗಳಿಗೆ ಭದ್ರತೆ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ರಾಜ್ಯದ ಕೆಳಹಂತದ ನ್ಯಾಯಾಲಯಗಳಿಗೆ ಯಾವ ರೀತಿಯಲ್ಲಿ ಭದ್ರತೆ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳುತ್ತದೆ ;

(ಈ) ಭದ್ರತಾ ಲೋಪದಿಂದಾಗಿ ರಾಜ್ಯ ಕೆಳಹಂತದ ನ್ಯಾಯಾಲಯಗಳಲ್ಲಿ ಉಂಟಾಗಿರುವ ಅನಾಹುತಗಳೇನು ; ಈ ಬಗ್ಗೆ ವರದಿಯಾದ ಪ್ರಕರಣಗಳೆಷ್ಟು ;

(ಉ) ಈ ಪ್ರಕರಣಗಳಲ್ಲಿ ಕೈಗೊಂಡಿರುವ ಕ್ರಮಗಳೇನು ; ಮುಂದೆ ಈ ರೀತಿಯಾಗದಂತೆ ಸರ್ಕಾರ ಕ್ರಮ ವಹಿಸುವುದೇ ?

## ಅತ್ಯಾಚಾರ ಪ್ರಕರಣಗಳು

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೯೫೩ (೧೦೦೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಹಿಳೆಯರು ಮತ್ತು ಅಪ್ರಾಪ್ತ ಹೆಣ್ಣು ಮಕ್ಕಳ ಮೇಲೆ ಅತ್ಯಾಚಾರ ನಡೆದಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ಅತ್ಯಾಚಾರ ನಡೆದಿರುವ ಪ್ರಕರಣಗಳ ಪೈಕಿ ಮೊಕದ್ದಮೆ ದಾಖಲಾಗಿ ಶಿಕ್ಷೆಗೊಳಪಡಿಸಲಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ನ್ಯಾಯಾಲಯದಲ್ಲಿ ಇತ್ಯರ್ಥಪಡಿಸಲು ಬಾಕಿಯಿರುವ ಇಂತಹ ಅತ್ಯಾಚಾರ ಪ್ರಕರಣಗಳ ಸಂಖ್ಯೆ ಎಷ್ಟು ;

(ಈ) ಅತ್ಯಾಚಾರ ಪ್ರಕರಣಗಳಲ್ಲಿ ಭಾಗಿಯಾದ ಆರೋಪಿಗಳು ಶಿಕ್ಷೆಯಿಂದ ಖುಲಾಸೆಗೊಂಡ ಪ್ರಕರಣಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

## ವಿವಿಧ ಇಲಾಖಾ ಕಛೇರಿಗಳಲ್ಲಿ ಮಹಿಳಾ ನೌಕರರ ರಕ್ಷಣೆ

**ಶ್ರೀ ವಿ.ಎಸ್. ಉಗ್ರಪ್ಪ (ನಾಮನಿರ್ದೇಶನ ಹೊಂದಿದವರು) –**

೯೫೪ (೧೦೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರತಿ ಇಲಾಖೆಯಲ್ಲಿ ಮಂಜೂರಾದ ಒಟ್ಟು ಹುದ್ದೆಗಳು ಎಷ್ಟು ; (ವೃಂದವಾರು ಮಾಹಿತಿ ನೀಡುವುದು)

(ಆ) ಆ ಹುದ್ದೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹಿಳೆಯರು ಮತ್ತು ಪುರುಷರ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಇ) ಮಹಿಳಾ ನೌಕರರ ರಕ್ಷಣೆಗಾಗಿ ಇಲಾಖೆಗಳಲ್ಲಿ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ ; (ಇಲಾಖಾವಾರು ಮಾಹಿತಿ ನೀಡುವುದು)

(ಈ) ಪ್ರತಿಯೊಂದು ಇಲಾಖೆಯಲ್ಲೂ ಪ್ರತಿ ಹಂತದಲ್ಲೂ ಮಹಿಳೆಯರ ರಕ್ಷಣೆ ನಿಟ್ಟಿನಲ್ಲಿ ಅವರ ಅಹವಾಲು ಕೇಳಲು ಹಾಗೂ ದೌರ್ಜನ್ಯ ತಡೆಯಲು ಆಂತರಿಕ ದೂರು ಸಮಿತಿಗಳನ್ನು ರಚಿಸಲಾಗಿದೆಯೇ ; ರಚಿಸಿದ್ದಲ್ಲಿ, ಆ ಸಮಿತಿಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿವೆಯೇ ? (ಮಾಹಿತಿ ನೀಡುವುದು)

## ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಸಾಲ ನೀಡುವ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೫ (೯೯೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡದ ಫಲಾನುಭವಿಗಳಿಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಶೇ. ೪ರಷ್ಟು ಬಡ್ಡಿ ದರದಲ್ಲಿ ಸಾಲ ನೀಡುವ ಯೋಜನೆ ಜಾರಿಯಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಯಾವ ಯಾವ ಫಲಾನುಭವಿಗಳು ಈ ಯೋಜನೆ ಅಡಿಯಲ್ಲಿ ಸಾಲ ಪಡೆದು, ಯಾವ ಯಾವ ಸ್ಥಳಗಳಲ್ಲಿ ಕೈಗಾರಿಕೆಯನ್ನು ಪ್ರಾರಂಭಿಸಿರುತ್ತಾರೆ ;

(ಇ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಿಂದ ಸಾಲ ಪಡೆಯುವಾಗ ವಿಧಿಸುವ ಸೇವಾ ಶುಲ್ಕ ಎಷ್ಟು ;

(ಈ) ಈ ಸೇವಾ ಶುಲ್ಕದಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳಿಗೆ ರಿಯಾಯಿತಿ ಇದೆಯೇ ;

(ಉ) ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆಯಲ್ಲಿ ಫಲಾನುಭವಿಗಳಿಗೆ ಸಾಲ ನೀಡುವಾಗ ಬ್ಯಾಂಕುಗಳು ವಿಧಿಸುವ ಸೇವಾ ವೆಚ್ಚ (L.A.F.D.) Up-front fee and documentation ಶುಲ್ಕ ಇವುಗಳನ್ನು ಸಾಮಾನ್ಯ ವರ್ಗಕ್ಕೆ ವಿಧಿಸುವ ದರದಲ್ಲಿ ಪರಿಶಿಷ್ಠ ಜಾತಿ/ಪರಿಶಿಷ್ಠ ಪಂಗಡಗಳಿಗೆ ಅರ್ಧ ಭಾಗದಷ್ಟು ರಿಯಾಯಿತಿ ನೀಡದಿರಲು ಕಾರಣವೇನು ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಬಡಾವಣೆ ನಿರ್ಮಾಣ ಹಾಗೂ ನಿವೇಶನದ ಹಂಚಿಕೆ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೬ (೯೯೭) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಆರಂಭದಿಂದ ಇದುವರೆವಿಗೂ ನಿರ್ಮಿಸಲಾದ ಬಡಾವಣೆಗಳೆಷ್ಟು ; ಅವುಗಳ ಹೆಸರನ್ನು ನೀಡುವುದು ;

(ಆ) ಪ್ರತಿ ಬಡಾವಣೆಗಳಲ್ಲಿ ಯಾವ ಯಾವ ಅಳತೆಯ ಎಷ್ಟೆಷ್ಟು ನಿವೇಶನಗಳನ್ನು ನಿರ್ಮಿಸಲಾಗಿದೆ ;

(ಇ) ಈ ಬಡಾವಣೆಗಳಲ್ಲಿ ಯಾವ ಯಾವ ಅಳತೆಯ ನಿವೇಶನಗಳು ಹಂಚಿಕೆಯಾಗದೆ ಬಾಕಿ ಇವೆ ; (ವಿವರ ನೀಡುವುದು)

(ಈ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಹಂಚಿಕೆ ಮಾಡಿದ ನಿವೇಶನಗಳನ್ನು ರದ್ದುಪಡಿಸಿ, ಆ ನಿವೇಶನಗಳಿಗೆ ಪರ್ಯಾಯವಾಗಿ ಹಂಚಿಕೆಯಾಗಿರುವ ಒಟ್ಟು ನಿವೇಶನಗಳ ಸಂಖ್ಯೆ ಎಷ್ಟು ;

(ಉ) ಯಾವ ಯಾವ ಬಡಾವಣೆಗಳಲ್ಲಿ ನಿವೇಶನಗಳನ್ನು ನೀಡಲಾಗಿತ್ತು ; ಹಾಗೂ ನೀಡಲಾಗಿದ್ದ ನಿವೇಶನಗಳಿಗೆ ಪರ್ಯಾವಾಗಿ ಯಾವ ಯಾವ ಬಡಾವಣೆಗಳಲ್ಲಿ ನೀಡಲಾಗಿದೆ ? (ಅಳತೆ ಮತ್ತು ಫಲಾನುಭವಿಗಳ ಹೆಸರು ಮತ್ತು ವಿಳಾಸ ನೀಡುವುದು)

# ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕೊಳಚೆ ಪ್ರದೇಶಗಳನ್ನು ವಶಪಡಿಸಿಕೊಂಡಿರುವ ಬಗ್ಗೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೭ (೯೯೫) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಸ್ವಾಧೀನಪಡಿಸಿಕೊಂಡ ಕೊಳಚೆ ಪ್ರದೇಶಗಳ ಸಂಖ್ಯೆ ಎಷ್ಟು ; ಎಲ್ಲೆಲ್ಲಿ ವಶಪಡಿಸಿಕೊಳ್ಳಲಾಗಿದೆ ;

(ಆ) ವಶಪಡಿಸಿಕೊಂಡ ಕೊಳಚೆ ಪ್ರದೇಶದ ನಿರಾಶ್ರಿತರಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಕೈಗೊಂಡ ಪರ್ಯಾಯ ಕ್ರಮಗಳೇನು ;

(ಇ) ಬೆಂಕಿ ಅನಾಹುತದಿಂದ ಹಾಗೂ ಇತರೆ ಕಾರಣಗಳಿಂದಾಗಿ ನಿರಾಶ್ರಿತರಾದವರ ಸಂಖ್ಯೆ ಎಷ್ಟು ; ಈ ಬಗ್ಗೆ ಸಂಘ–ಸಂಸ್ಥೆಗಳ ಮನವಿಗಳೆಷ್ಟು ; ಯಾವ ಯಾವ ಸಂಘ–ಸಂಸ್ಥೆಗಳು ಪುನರ್ ವಸತಿ ಅಡಿಯಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಅರ್ಜಿ ಹಾಕಿಕೊಂಡಿವೆ ; (ಸಂಘ–ಸಂಸ್ಥೆಗಳ ಹೆಸರು, ಮನವಿ ಮಾಡಿಕೊಂಡ ನಿವೇಶನಗಳ ಸಂಖ್ಯೆ ಎಷ್ಟು)

(ಈ) ಈ ಸಂಘ–ಸಂಸ್ಥೆಗಳಿಗೆ ಎಲ್ಲೆಲ್ಲಿ ಪುನರ್ವಸತಿ ನಿವೇಶನಗಳನ್ನು ಕಲ್ಪಿಸಲಾಗಿದೆ ; ಸಂಘ–ಸಂಸ್ಥೆಗಳ ಅರ್ಜಿದಾರರ ಮನವಿಯನ್ನು ಪುರಸ್ಕರಿಸಲು ಬಾಕಿ ಎಷ್ಟಿವೆ ; (ಆಯಾ ಸಂಘಗಳ ಹೆಸರು, ಬೇಡಿಕೆಗಳ, ನಿವೇಶನಗಳ ಮಾಹಿತಿ ಒದಗಿಸುವುದು)

(ಉ) ಈ ಅರ್ಜಿಗಳನ್ನು ವಿಲೇವಾರಿ ಮಾಡಲು ಆಗುತ್ತಿರುವ ವಿಳಂಬಕ್ಕೆ ಕಾರಣಗಳೇನು ; ಅಲ್ಲದೆ ಎಷ್ಟು ಕಾಲಾವಧಿಯೊಳಗೆ ಈ ಎಲ್ಲಾ ಅರ್ಜಿಗಳನ್ನು ವಿಲೇವಾರಿ ಮಾಡಲಾಗುವುದು ?

## ಉಕ್ಕಿನ ಸೇತುವೆ ನಿರ್ಮಾಣ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೮ (೧೦೦೩) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನ ಚಾಲುಕ್ಯ ವೃತ್ತದಿಂದ ಹೆಬ್ಬಾಳದವರೆಗೆ ಉಕ್ಕಿನ ಸೇತುವೆ ನಿರ್ಮಾಣಕ್ಕೆ ತಗಲುವ ವೆಚ್ಚ ಎಷ್ಟು ;

(ಆ) ೨೦೧೬–೧೭ನೇ ಸಾಲಿನ ಆಯವ್ಯಯದಲ್ಲಿ ಉಕ್ಕಿನ ಸೇತುವೆ ನಿರ್ಮಾಣ ಮಾಡುವ ಪ್ರಸ್ತಾವವನ್ನು ಮಂಡಿಸಲಾಗಿದೆಯೇ ;

(ಇ) ಉಕ್ಕಿನ ಸೇತುವೆ ನಿರ್ಮಾಣದಿಂದ ಎಷ್ಟು ಮರಗಳನ್ನು ತೆರವು ಮಾಡಲಾಗುವುದು ;

(ಈ) ಮರಗಳ ತೆರವಿನಿಂದ ಪರಿಸರ ಮಾಲಿನ್ಯವನ್ನು ತಡೆಗಟ್ಟಲು ತೆಗೆದುಕೊಂಡ ಕ್ರಮಗಳೇನು ;

(ಉ) ಈ ಸೇತುವೆ ನಿಮಾಣ ಮಾಡಲು ಹಸಿರು ನ್ಯಾಯಾಧೀಕರಣದಿಂದ ಅನುಮತಿಯನ್ನು ಪಡೆಯಲಾಗಿದೆಯೇ ;

(ಊ) ಉಕ್ಕಿನ ಸೇತುವೆ ನಿರ್ಮಾಣದ ಬದಲಾಗಿ ಪರ್ಯಾಯ ಮಾರ್ಗಗಳನ್ನು ಹುಡುಕುವ ಪ್ರಯತ್ನ ಸರ್ಕಾರ ಕೈಗೊಂಡಿದೆಯೇ ?

## ಕೊಲೆ, ಸುಲಿಗೆ, ಅತ್ಯಾಚಾರ, ಮಕ್ಕಳ ಅಪಹರಣದ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೯೫೯ (೧೨೩೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ರಾಜ್ಯದಲ್ಲಿ ನಡೆದ ಕೊಲೆ, ಸುಲಿಗೆ, ದರೋಡೆ, ಅತ್ಯಾಚಾರ, ಸರಗಳ್ಳತನ ಮತ್ತು ಮಕ್ಕಳ ಅಪಹರಣ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಇವುಗಳಲ್ಲಿ ಇದುವರೆವಿಗೂ ಎಷ್ಟು ಅಪರಾಧಿಗಳನ್ನು ಪತ್ತೆ ಹಚ್ಚಿ ಶಿಕ್ಷೆಗೆ ಒಳಪಡಿಸಲಾಗಿದೆ ; ಪತ್ತೆ ಹಚ್ಚಬೇಕಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣವಾರು ಮಾಹಿತಿ ನೀಡುವುದು)

(ಇ) ಇತ್ತೀಚಿನ ದಿನಗಳಲ್ಲಿ ರಾಜ್ಯದಲ್ಲಿ ಕೊಲೆ ಮತ್ತು ಮಾರಣಾಂತಿಕ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಚಿಕ್ಕಮಕ್ಕಳನ್ನು ಅಪಹರಣ ಮಾಡಿ ಬೇರೆ ಬೇರೆ ರಾಜ್ಯಗಳಿಗೆ ಮಾರಾಟ ಮಾಡುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಉ) ಮಹಿಳೆಯರ ಮೇಲೆ ಹಲ್ಲೆ ಮತ್ತು ಸರಗಳ್ಳತನ ಪ್ರಕರಣಗಳನ್ನು ನಿಯಂತ್ರಣಕ್ಕೆ ತರಲು ಪೊಲೀಸ್ ಇಲಾಖೆ ಸಂಪೂರ್ಣವಾಗಿ ವಿಫಲವಾಗಿರುವುದನ್ನು ಸರ್ಕಾರ ಮನಗಂಡಿದೆಯೇ ;

(ಊ) ಹಾಗಿದ್ದಲ್ಲಿ, ಈ ಎಲ್ಲಾ ಪ್ರಕರಣಗಳನ್ನು ನಿಯಂತ್ರಣಕ್ಕೆ ತರಲು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆಯನ್ನು ಕಾಪಾಡಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳುವುದು ? (ವಿವರ ನೀಡುವುದು)

## ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ಖಾಲಿ ಹುದ್ದೆಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬೦ (೧೨೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಬ್ಬಂದಿ ವುತ್ತು ಆಡಳಿತ ಸುಧಾರಣೆ ಇಲಾಖೆಂುಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ;

(ಇ) ಖಾಲಿ ಇರುವ ಹುದ್ದೆಗಳನ್ನು ತುಂಬಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಕ್ರಮ ಕೈಗೊಳ್ಳಲಿದೆ ?

## ಪರವಾನಗಿ ಇಲ್ಲದೆ ನಡೆಯುತ್ತಿರುವ ಮದ್ಯದ ಅಂಗಡಿಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬೧ (೧೨೩೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಬಕಾರಿ ಇಲಾಖೆಯಿಂದ ಪರವಾನಗಿ ಪಡೆದಿರುವ ಬಾರ್ ಮತ್ತು ರೆಸ್ಟೋರೆಂಟ್, ವೈನ್ ಶಾಪ್ ಮತ್ತು ಚಿಲ್ಲರೆ ಮದ್ಯ ಮಾರಾಟ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ಇವುಗಳಿಂದ ಸರ್ಕಾರಕ್ಕೆ ಬರುವ ಒಟ್ಟು ವಾರ್ಷಿಕ ಆದಾಯವೆಷ್ಟು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಗ್ರಾಮಾಂತರ ಪ್ರದೇಶಗಳಲ್ಲಿ ಕಳ್ಳಬಟ್ಟಿಯನ್ನು ನಿಯಂತ್ರಣಕ್ಕೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಅಬಕಾರಿ ಇಲಾಖೆಯಲ್ಲಿ ಸಿಬ್ಬಂದಿಯ ಕೊರತೆ ಇರುವುದು ನಿಜವೇ ? (ಸಂಪೂರ್ಣ ವಿವರ ನೀಡುವುದು)

## ಬೀದಿ ವ್ಯಾಪಾರಿಗಳಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬೨ (೧೨೩೮) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ರಾಮಮೂರ್ತಿನಗರ, ಟಿ.ಸಿ. ಪಾಳ್ಯ ಮುಖ್ಯ ರಸ್ತೆಯ ಆನೆಪ್ಪ ಸರ್ಕಲ್ ಮತ್ತು ಆನಂದಪುರ ಸರ್ಕಲ್‌ಗಳಲ್ಲಿ ಬೀದಿ ಬದಿಯ ವ್ಯಾಪಾರಿಗಳು ರಸ್ತೆಗಳಲ್ಲಿ ವ್ಯಾಪಾರ ವಹಿವಾಟು ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದೇ ಪ್ರದೇಶಗಳಲ್ಲಿ ಅನೇಕ ಹೋಟೆಲ್‌ಗಳನ್ನು ಯಾವುದೇ ಪರವಾನಗಿ ಪಡೆಯದೆ ನಡೆಸುತ್ತಿರುವುದು ಸರ್ಕಾರ ಗಮನಿಸಿದೆಯೇ ;

(ಇ) ಇಲ್ಲಿ ಮಾರಾಟ ಮಾಡುವ ಬೀದಿ ಬದಿಯ ಬಂಡಿಗಳಿಂದ ಹಿಡಿದು ಹೋಟೆಲ್‌ವರೆಗೆ ಯಾರು ಸ್ವಚ್ಛತೆ ಕಾಪಾಡದಿರುವುದು ಸರ್ಕಾರ ಮನಗಂಡಿದೆಯೇ ;

(ಈ) ಈ ಎಲ್ಲಾ ವಿಷಯಗಳಲ್ಲಿ ಅಧಿಕಾರಿಗಳು ಯಾರ ವಿರುದ್ಧವೂ ಕ್ರಮ ಜರುಗಿಸದೆ, ದೂರು ನೀಡಿದ್ದರೂ ಪರಿಶೀಲಿಸದೆ, ಸಾರ್ವಜನಿಕರಿಗೆ ತೊಂದರೆ ನೀಡುತ್ತಿರುವವರ ವಿರುದ್ಧ ಕ್ರಮ ಕೈಗೊಳ್ಳದಿರಲು ಕಾರಣಗಳೇನು ;

(ಉ) ಇದನ್ನು ಸರಿಪಡಿಸಲು ಸರ್ಕಾರ ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳುವುದು ?

## ಸೊಳ್ಳೆ ನಿಯಂತ್ರಣಕ್ಕೆ ಸಿಂಪಡಿಸುವ ಔಷಧಿಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು) –**

೯೬೩ (೧೨೪೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದ ಅನೇಕ ವಸತಿ ಪ್ರದೇಶಗಳಲ್ಲಿ ಸೊಳ್ಳೆಗಳ ಹಾವಳಿ ಜಾಸ್ತಿಯಾಗಿ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಸೊಳ್ಳೆಗಳ ಹಾವಳಿಯಿಂದ ಡೆಂಗ್ಯೂ, ಚಿಕನ್‌ಗುನ್ಯಾ ಹಾಗೂ ಇನ್ನು ಇತರೆ ಸಾಂಕ್ರಾಮಿಕ ರೋಗಗಳು ದಿನೇ ದಿನೇ ಹೆಚ್ಚಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ ;

(ಇ) ಸರ್ಕಾರ ಸೊಳ್ಳೆಗಳ ನಿಯಂತ್ರಣಕ್ಕೆ ಸಿಂಪಡಿಸುವ ಔಷಧಿಯನ್ನು ಖರೀದಿಸಲು ಪ್ರಸಕ್ತ ಸಾಲಿನಲ್ಲಿ ವೆಚ್ಚ ಮಾಡಿರುವ ಮೊತ್ತ ಎಷ್ಟು ;

(ಈ) ನಗರದಲ್ಲಿ ಔಷಧಿಯನ್ನು ಸಿಂಪಡಿಸಲು ಯಾವ ಯಾವ ಸಂಸ್ಥೆಗಳಿಗೆ ಗುತ್ತಿಗೆಯನ್ನು ನೀಡಲಾಗಿದೆ ; ಹಾಗೂ ಇದನ್ನು ಪರಿಶೀಲಿಸುವ ಅಧಿಕಾರಿ ಯಾರು ;

(ಉ) ಈ ಒಂದು ಔಷಧಿ ಗುತ್ತಿಗೆಯಲ್ಲಿ ಭ್ರಷ್ಟಾಚಾರ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ರೀತಿಯ ಕ್ರಮ ಕೈಗೊಳ್ಳುವುದು ?

## ಅಪರಾಧಿಗಳನ್ನು ಹಿಡಿಯಲು ನ್ಯಾಯಾಲಯದಿಂದ ವಾರೆಂಟ್ ಹೊರಡಿಸಿ ಪತ್ತೆ ಹಚ್ಚದೇ ಇರುವ ಅಪರಾಧಿಗಳ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೬೪ (೧೦೧೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿರುವ ವಿವಿಧ ಪೊಲೀಸ್ ಠಾಣೆಗಳಲ್ಲಿ ನ್ಯಾಯಾಲಯದಿಂದ ಅಪರಾಧಿಗಳನ್ನು ಹಿಡಿಯಲು ವಾರೆಂಟ್ ಹೊರಡಿಸಿರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಆ) ಸದರಿ ಪ್ರಕರಣದಲ್ಲಿ ತೊಡಗಿಸಿಕೊಂಡಿರುವ ಅಪರಾಧಿಗಳ ಹೆಸರು, ಯಾವ ದಿನಾಂಕದಿಂದ ಸಂಬಂಧಿಸಿದ ಅಪರಾಧಿಗಳಿಗೆ ವಾರೆಂಟ್ ಹೊರಡಿಸಿರುತ್ತಾರೆ ;

(ಇ) ಯಾವ ಪ್ರಕರಣದಲ್ಲಿ ವಾರೆಂಟ್ ಹೊರಡಿಸಿರುತ್ತಾರೆ ; ಎಷ್ಟು ವರ್ಷಗಳಿಂದ ಶಿಲ್ಕು ಇರುತ್ತದೆ ; (ವಿವರ ನೀಡುವುದು)

(ಈ) ಇಲ್ಲಿಯವರೆಗೆ ಅವರನ್ನು ಹಿಡಿಯದೇ ಇರಲು ಕಾರಣವೇನು ? (ತಾಲ್ಲೂಕುವಾರು/ಜಿಲ್ಲಾವಾರು ವಿವರ ನೀಡುವುದು)

## ಪೊಲೀಸ್ ವಸತಿ ಗೃಹಗಳ ಸೌಲಭ್ಯಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೬೫ (೧೧೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಎಷ್ಟು ಪೊಲೀಸ್ ವಸತಿ ಗೃಹಗಳಿವೆ ; ಅವುಗಳು ಯಾವುವು ; ಯಾವ ಯಾವ ಸ್ಥಳಗಳಲ್ಲಿ ಇವೆ ; ಇವುಗಳಲ್ಲಿ ಇರುವ ಮನೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಈ ವಸತಿ ಗೃಹಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ ; (ಪೂರ್ಣ ಮಾಹಿತಿ ನೀಡುವುದು)

(ಇ) ಈ ಜಿಲ್ಲೆಗಳಲ್ಲಿನ ಯಾವ ಸ್ಥಳದಲ್ಲಿ ವಸತಿ ಗೃಹ ಇರುವುದಿಲ್ಲ ; ಇಲ್ಲದಿರುವ ಸ್ಥಳಗಳಲ್ಲಿ ಪೊಲೀಸ್ ವಸತಿ ಗೃಹಗಳನ್ನು ಸ್ಥಾಪಿಸಿ ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಎಸ್‌ಸಿಪಿ/ಟಿಎಸ್‌ಪಿ ಯೋಜನೆಯಡಿ ಮಂಜೂರಾದ ಅನುದಾನದ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೬೬೬ (೧೧೪೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳ ಎಲ್ಲಾ ಇಲಾಖೆಗಳಿಗೆ ವಿವಿಧ ಕಾರ್ಯಕ್ರಮಗಳಿಗೆ ಎಸ್.ಸಿ.ಪಿ/ಟಿ.ಎಸ್.ಪಿ. ಅಡಿಯಲ್ಲಿ ೨೦೧೮–೧೯ರಲ್ಲಿ ನಿಗಧಿಪಡಿಸಿರುವ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ಬಾಕಿ ಉಳಿದ ಅನುದಾನ ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ೨೦೧೮–೧೯ರಲ್ಲಿ ಯಾವ ಯಾವ ಇಲಾಖೆಗಳಿಗೆ ಯಾವ ಯಾವ ಕಾರ್ಯಕ್ರಮಗಳಲ್ಲಿ ಬಿಡುಗಡೆಯಾದ ಅನುದಾನವನ್ನು ಉಪಯೋಗಿಸಲಾಗಿದೆ ;

(ಇ) ಈ ಜಿಲ್ಲೆಗಳಲ್ಲಿ ಆ ಪೈಕಿ ಎಲ್ಲಾ ಇಲಾಖೆಗಳಲ್ಲಿ ಖರ್ಚಾಗದೆ ಉಳಿದ ಅನುದಾನವನ್ನು ಮುಂದಿನ ಸಾಲಿನಲ್ಲಿ ಉಪಯೋಗಿಸಿಕೊಳ್ಳಲಾಗುವುದೇ ?

## ನಿರುಪಯುಕ್ತ ಸರ್ಕಾರಿ ವಾಹನಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೬೭ (೧೧೪೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ವಿವಿಧ ಸರ್ಕಾರಿ ಇಲಾಖೆಗಳಲ್ಲಿ ಉಪಯೋಗಕ್ಕೆ ಬಾರದಿರುವ ಒಟ್ಟು ಸರ್ಕಾರಿ ವಾಹನಗಳ ಸಂಖ್ಯೆ ಎಷ್ಟು ; (ವಾಹನಗಳವಾರು ವಿವರ ನೀಡುವುದು)

(ಆ) ಈ ವಾಹನಗಳು ನಿರುಪಯುಕ್ತ ಎಂದು ಪರಿಗಣಿಸಲು ಹಾಗೂ ಇವುಗಳನ್ನು ಹರಾಜು ಮಾಡಲು ಇರುವ ಮಾನದಂಡಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಇಂತಹ ಎಷ್ಟು ವಾಹನಗಳನ್ನು ಹರಾಜು ಮಾಡಲಾಗಿದೆ ; ಇದರಿಂದ ಸರ್ಕಾರಕ್ಕೆ ಪಾವತಿಯಾದ ಹಣ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಈ) ಇನ್ನೂ ಹರಾಜು ಮಾಡದೇ ತುಕ್ಕು ಹಿಡಿದಿರುವ ವಾಹನಗಳನ್ನು ಹಾಗೆ ಇಟ್ಟಿರುವುದಕ್ಕೆ ಕಾರಣಗಳೇನು ; ಇವುಗಳನ್ನು ಮುಕ್ತ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಅಬಕಾರಿ ಇಲಾಖೆಯಿಂದ ಗ್ರಾಮ ಸಭೆಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೬೮ (೧೧೪೭) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಬಕಾರಿ ಇಲಾಖೆಯಿಂದ ಎಷ್ಟು ಗ್ರಾಮ ಸಭೆಗಳನ್ನು ನಡೆಸಲಾಗಿದೆ ; (ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು)

(ಆ) ಹಾಗಿದ್ದಲ್ಲಿ, ಈ ೩ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ಅಬಕಾರಿ ಇಲಾಖೆಯವರಿಂದ ಅನಧಿಕೃತ ಮತ್ತು ಕಳ್ಳಬಟ್ಟಿ ಸಾರಾಯಿ ಹಾವಳಿಯನ್ನು ತಡೆಗಟ್ಟಲು ಯಾವ ಯಾವ ಗ್ರಾಮಗಳಲ್ಲಿ ಗ್ರಾಮ ಸಭೆಗಳನ್ನು ನಡೆಸಲಾಗಿದೆ ; ಈ ಸಭೆ ನಡೆದ ಗ್ರಾಮದ ಹೆಸರು, ಗ್ರಾಮ ಸಭೆಯ ಫೋಟೋಗಳೊಂದಿಗೆ ಅಧೀನ ವಲಯಗಳೊಂದಿಗೆ ಹಾಗೂ ಇಲಾಖೆ ಅಧಿಕಾರಿ/ಸಿಬ್ಬಂದಿಗಳವಾರು, ವರ್ಷಾವಾರು, ಗ್ರಾಮವಾರು ಹಾಗೂ ತಾಲ್ಲೂಕುವಾರು ಸಂಪೂರ್ಣ ವಿವರ ನೀಡುವುದು ;

(ಇ) ಈ ೩ ಜಿಲ್ಲೆಗಳಲ್ಲಿ ಅಬಕಾರಿ ಇಲಾಖೆಯಿಂದ ಗ್ರಾಮ ಸಭೆಗಳನ್ನು ನಡೆಸದೆ ಇರುವುದಕ್ಕೆ ಕಾರಣಗಳೇನು ; ಈ ಸಭೆಗಳನ್ನು ನಡೆಸದೆ ಇರುವ ಅಧಿಕಾರಿ/ಅಧೀನ ಸಿಬ್ಬಂದಿಗಳ ಮೇಲೆ ಸರ್ಕಾರವು ಯಾವ ಕ್ರಮ ಕೈಗೊಂಡಿದೆ ? (ವಲಯವಾರು ಸಂಪೂರ್ಣ ವಿವರ ನೀಡುವುದು)

## ಪೊಲೀಸ್ ಠಾಣೆಗಳ ಬಗ್ಗೆ

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) –**

೯೬೯ (೧೧೪೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರವಾಡ, ಗದಗ ಹಾಗೂ ಹಾವೇರಿ ಜಿಲ್ಲೆಗಳಲ್ಲಿ ಎಷ್ಟು ಪೊಲೀಸ್ ಠಾಣೆಗಳು ಇವೆ ; (ಮಹಿಳಾ ಠಾಣೆಗಳನ್ನು ಒಳಗೊಂಡಂತೆ) ಅವುಗಳು ಯಾವುವು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಇವುಗಳಲ್ಲಿ ವಾಹನಗಳಿಲ್ಲದೆ ಕಾನೂನು ಮತ್ತು ಸುವ್ಯವಸ್ಥೆಗೆ ಕಷ್ಟವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಠಾಣೆಗಳಿಗೆ ವಾಹನಗಳನ್ನು ಒದಗಿಸಲು ಸರ್ಕಾರವು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಈ ಎಲ್ಲಾ ಠಾಣೆಗಳಲ್ಲಿ ಮಂಜೂರಾದ ಹುದ್ದೆಗಳು ಭರ್ತಿಯಾಗಿವೆಯೇ ; ಇಲ್ಲದಿದ್ದಲ್ಲಿ, ಖಾಲಿ ಇರುವ ಹುದ್ದೆಗಳು ಎಷ್ಟು ? (ಠಾಣೆವಾರು ವಿವರ ನೀಡುವುದು)

## ಕಲಬುರಗಿ ಜಿಲ್ಲೆಯ ಪೊಲೀಸ್ ಇಲಾಖೆಯಲ್ಲಿನ ಮಹಿಳಾ ಪೇದೆಗಳಿಗೆ ಸಂಬಂಧಿಸಿದ ಬಗ್ಗೆ

**ಶ್ರೀ ಇಕ್ಬಾಲ್ ಅಹಮದ್ ಸರಡಗಿ (ನಾಮನಿರ್ದೇಶನ ಹೊಂದಿದವರು) –**

೯೭೦ (೧೧೭೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆಯಲ್ಲಿ ಇರುವ ಒಟ್ಟು ಮಹಿಳಾ ಪೇದೆಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಜನಸಂಖ್ಯೆಗೆ ಅನುಗುಣವಾಗಿ ಜಿಲ್ಲೆಯಲ್ಲಿ ಒಟ್ಟು ಎಷ್ಟು ಜನ ಸಂಖ್ಯೆಗೆ ಒಬ್ಬರಂತೆ ಮಹಿಳಾ ಪೇದೆಗಳಿದ್ದಾರೆ ;

(ಇ) ಇಂತಹ ಶೇಕಡವಾರು ಸರಿಯಾಗಿದೆಯೇ ; ಕಡಿಮೆ ಇದ್ದಲ್ಲಿ, ಸೂಕ್ತ ಕಾರಣ ತಿಳಿಸುವುದು ಮತ್ತು ಇಂತಹ ಶೇಕಡವಾರನ್ನು ಎಷ್ಟು ಸಮಯದಲ್ಲಿ ಸರಿದೂಗಿಸಲು ಕ್ರಮ ಕೈಗೊಳ್ಳಲಾಗಿದೆ ?

## ಏಳನೇ ವೇತನ ಆಯೋಗ ರಚಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೭೧ (೧೨೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ನೌಕರರಿಗೆ ಏಳನೇ ವೇತನ ಆಯೋಗ ರಚಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಆ) ಇದ್ದಲ್ಲಿ, ಕಾಲಮಿತಿ ಏನು ;

(ಇ) ಕೇಂದ್ರ ಸರ್ಕಾರಿ ನೌಕರರಿಗೆ ಸಮಾನಾಂತರವಾದ ವೇತನ ಮತ್ತು ಭತ್ಯೆಗಳನ್ನು ರಾಜ್ಯ ಸರ್ಕಾರಿ ನೌಕರರಿಗೂ ಅನ್ವಯಿಸುವಂತೆ ಏಳನೇ ವೇತನ ಆಯೋಗದ ಮುಖಾಂತರ ಜಾರಿಗೊಳಿಸುವ ಯೋಚನೆ ಸರ್ಕಾರದ ಮುಂದಿದೆಯೇ ?

## ಬೆಂಗಳೂರು ಮೆಟ್ರೋ ರೈಲುಗಳಿಗೆ ಹೆಚ್ಚುವರಿ ಬೋಗಿ ಅಳವಡಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೭೨ (೧೨೭೦) ಮಾನ್ಯ ಬೆಂಗಳೂರು ಅಭಿವೃದ್ಧಿ ಮತ್ತು ನಗರ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮೆಟ್ರೋ ರೈಲುಗಳಲ್ಲಿ, ಬೆಳಿಗ್ಗೆ ಮತ್ತು ಸಾಯಂಕಾಲದ ವೇಳೆಗಳಲ್ಲಿ ಪ್ರಯಾಣಿಕರ ದಟ್ಟಣೆಯಿಂದಾಗಿ, ಮಹಿಳೆ, ಮಕ್ಕಳು, ವೃದ್ಧರು

ಮತ್ತು ಅಂಗವಿಕಲರು ಪ್ರಯಾಣ ಮಾಡಲಾಗದೆ, ತೊಂದರೆಗೊಳಗಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಜನರ ಸುಗಮ ಪ್ರಯಾಣಕ್ಕಾಗಿ ಹೆಚ್ಚುವರಿ ಬೋಗಿಗಳನ್ನು ಅಳವಡಿಸುವ ಪ್ರಸ್ತಾವ ಸರ್ಕಾರದ ಮುಂದಿದೆಯೇ ;

(ಇ) ಇದ್ದಲ್ಲಿ, ಕಾಲಮಿತಿ ಏನು ಹಾಗೂ ಸದರಿ ಬೋಗಿಗಳಲ್ಲಿ ಮಹಿಳೆಯರಿಗಾಗಿಯೇ ಬೋಗಿಗಳನ್ನು ಮೀಸಲಿಡುವ ಪ್ರಸ್ತಾವ ಇದೆಯೇ ? (ಸಂಪೂರ್ಣ ವಿವರ ನೀಡುವುದು)

## ಪೊಲೀಸ್ (ಸಿವಿಲ್) ಕಾನ್ಸ್‌ಟೇಬಲ್‌ಗಳಿಗೆ ವಸತಿ ಸೌಕರ್ಯ ಕಲ್ಪಿಸುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೯೭೩ (೧೨೮೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಇರುವ ಪೊಲೀಸ್ (ಸಿವಿಲ್) ಕಾನ್ಸ್‌ಟೇಬಲ್‌ಗಳ ಸಂಖ್ಯೆ ಎಷ್ಟು ;

(ಆ) ಪ್ರತಿಯೊಬ್ಬರಿಗೂ ವಸತಿ ಸೌಕರ್ಯ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ;

(ಇ) ಪೊಲೀಸ್ ವಸತಿ ನಿಲಯಗಳ ನಿರ್ಮಾಣಕ್ಕೆ ಯಾವ ಮೂಲಗಳಿಂದ ಹಣ ಭರಿಸಲಾಗುವುದು ; ಹಾಗೂ ಎಷ್ಟು ವಸತಿ ನಿಲಯಗಳನ್ನು ೨೦೧೬–೧೭ನೇ ಸಾಲಿನಲ್ಲಿ ನಿರ್ಮಿಸಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

**ಶ್ರೀನಿವಾಸ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು.

ಸರ್ಕಾರಿ ಮುದ್ರಣಾಲಯ, ಬೆಳಗಾವಿ